ಸಂಪುಟ : 4 ಸಂಚಿಕೆ : 36 ಪುಟ : 4 ಬೆಲೆ : ರೂ. 4 ಸೋಮವಾರ, ಮಾರ್ಚ್ 20, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 36 Pages : 4 Rate : 4 Rs Monday, March 20, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

## ಬಿಜೆಪಿ ಸರ್ಕಾರ ಬುಡಸಮೇತ ಕಿತ್ತೆಸೆಯಿರಿ: ಸುರ್ಜೇವಾಲಾ ವಾಗ್ದಾಳಿ

## ಯುವಕ್ರಾಂತಿ ರ್‍ಯಾಲಿಯಲ್ಲಿ ಯುವಕರಿಗೆ ಯೋಜನೆ ಘೋಷಣೆ; ಯುವಕರಿಗೆ ಬಲತುಂಬಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪಣ

ಬೆಳಗಾವಿ: ಭರವಸೆಗಳನ್ನು ನೀಡಿ, ಯುವಕರಿಗೆ ಉದ್ಯೋಗ ನೀಡದ ಬಿಜೆಪಿ ಸರ್ಕಾರವನ್ನು ಬುಡಸಮೇತ ಕಿತ್ತೆಸೆಯಲು ಯುವಜನತೆ ಮುಂದಾಗಬೇಕು ಎಂದು ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ ಸಿಂಗ್ ಸುರ್ಜೇವಾಲಾ ಕರೆ ನೀಡಿದರು.

ಇಲ್ಲಿನ ಸಿಪಿಎಡ್ ವೈದಾನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಸರ್ಕಾರ ನೀಡಿದ ಪೊಳ್ಳು ಭರವಸೆಯಿಂದ ಯುವಕರು ಉತ್ಸಾಹ ಕಳೆದುಕೊಂಡಿದ್ದಾರೆ.

ಯುವಕರಿಗೆ ಬಲತುಂಬಲೆಂದೇ ರಾಹುಲ್ ಗಾಂಧಿ ಅವರು ಪಣತೊಟ್ಟಿದ್ದು, ಬೆಳಗಾವಿಯಿಂದ ಯುವಕಾಂತ್ರಿ ರ್‍ಯಾಲಿ ಮಾಡುವ ಮೂಲಕ ಚುನಾವಣೆ ರಣಕಹಳೆ ಮೊಳಗಿಸಲಿದ್ದಾರೆ ಎಂದರು.

ಯುವಕರಿಗೆ ಯೋಜನೆ ಘೋಷಣೆ: ಮಾ. 20 ರಂದು 11 ಗಂಟೆಗೆ ಬೆಳಗಾವಿಯಲ್ಲಿ ಯುವಕ್ರಾಂತಿ ರ್‍ಯಾಲಿ ನಡೆಯಲಿದೆ. ರ್‍ಯಾಲಿಯನ್ನ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಉದ್ಘಾಟಿಸಲಿದ್ದಾರೆ. ಈ ವೇಳೆ ಯುವಕರಿಗೆ ಯೋಜನೆ ಘೋಷಣೆ ಮಾಡುತ್ತೇವೆ ಎಂದ ಅವರು, ಈ ಸಮಾವೇಶದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಬೊಮ್ಮಾಯಿ ಸರ್ಕಾರ ಯುವಕರ ಭವಿಷ್ಯವನ್ನ ಹಾಳು ಮಾಡಿದೆ. ಪಿಎಸ್ ಐ ಹುದ್ದೆ ಸೇರಿದಂತೆ ಸರ್ಕಾರಿ ಹುದ್ದೆಯನ್ನ ಮಾರಾಟ ಮಾಡಿದ್ದಾರೆ. ಕೈಗಾರಿಕೋದ್ಯಮಗಳು ಅನ್ಯರಾಜ್ಯಗಳ ಪಾಲಾಗುತ್ತಿವೆ ಎಂದು ವಾಗ್ದಾಳಿ ನಡೆಸಿದರು.

ಪಕೋಡಾ ಮಾರಿ: ಉದ್ಯೋಗ ಸೃಷ್ಟಿಸುವುದಾಗಿ ಅಧಿಕಾರಕ್ಕೇರಿದ ಬಿಜೆಪಿ ಯುವಕರಿಗೆ ಪಕೋಡಾ ಮಾರಾಟ ಮಾಡಿ ಎಂದು ಹೇಳುತ್ತಿದೆ. ಉನ್ನತ ಶಿಕ್ಷಣ ಪಡೆದವರು ಪಕೋಡಾ ಮಾಡಬೇಕಾ..? ಇಂದು ನೌಕರಿಗಾಗಿ ಯುವಕರು ಹರಸಾಹಸ ಪಡುತ್ತಿದ್ದಾರೆ. ಎಂಟು ವರ್ಷಗಳಲ್ಲಿ ನಿರುದ್ಯೋಗ, ಆರ್ಥಿಕ ಮಟ್ಟ ಪಾತಾಳ ಕಂಡಿದೆ ಎಂದು ಬೊಮ್ಮಾಯಿ ಸರ್ಕಾರ ವಿರುದ್ಧ ಕಿಡಿ ಕಾರಿದರು.



**ಬಿಜೆಪಿಗೆ ಅಧಿಕಾರ ವ್ಯಾಮೋಹ:**

ಬಿಜೆಪಿಗೆ ಅಧಿಕಾರ ವ್ಯಾ ಮೋಹ ಇದೆ. ಆದರೆ, ಅಭಿವೃದ್ಧಿ ಮಾಡಬೇಕೆಂಬ ಹಂಬಲ ಇಲ್ಲವಾಗಿದೆ. ಶೌಚಾಲಯ ಹೆಸರಿನಲ್ಲಿ ಜನರನ್ನು ಸೆಳೆಯುವ ತಂತ್ರ ಮಾಡುತ್ತಿದ್ದಾರೆ. ಕಾಂಗ್ರೆಸ್ ಎಲ್ಲವನ್ನೂ ಮಾಡಿದೇ ಆದರೆ, ಶೌಚಾಲಯ ಪ್ರಚಾರ ತೆಗೆದುಕೊಂಡಿಲ್ಲ ಎಂದು ಸರ್ಕಾರ ವಿರುದ್ಧ ಚಾಟಿ ಬೀಸಿದರು.

ದುರಾಡಳಿತ ಸರ್ಕಾರವನ್ನು ತಿರಸ್ಕರಿಸಿ: ರಾಜ್ಯದ ಜನತೆ ಬಿಜೆಪಿ ಸರ್ಕಾರಕ್ಕೆ ಮುಂಬರುವ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕಿದೆ. ನೇಮಕಾತಿ, ಗುತ್ತಿಗೆದಾರರಿಂದ 40% ಕಮಿಷನ್ ಪಡೆದಿರುವ ದುರಾಡಳಿತ ಸರ್ಕಾರವನ್ನು ಜನರು ತಿರಸ್ಕರಿಸಬೇಕು. ಕಾಂಗ್ರೆಸ್ ಪಕ್ಷ ಮನೆಯ ಯಜಮಾನಿಗೆ ನೀಡಲು ಉದ್ದೇಶಿಸಿರುವ .2000 ಮಾಸಿಕ ಹಣವದ ಕುರಿತು ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ ಸಿಂಗ್ ಸುರ್ಜೇವಾಲಾ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಉದ್ದೇಶಿಸಿ ವ್ಯಂಗ್ಯವಾಡಿದ್ದಾರೆ.

ನುಡಿದಂತೆ ನಡೆದ ಕೈ ಪಕ್ಷ: ಕಾಂಗ್ರೆಸ್ ಪ್ರಣಾಳಿಕೆಗಳನ್ನು ಕಾರ್ಯಕರ್ತರು ಮತದಾರರ ಮನೆಗೆ 10 ದಿನಗಳಲ್ಲಿ ತಲುಪಿಸಿ. ಕಾಂಗ್ರೆಸ್ ಕರ್ನಾಟಕ ಬ್ರ್ಯಾಂಡ್ ಉಳಿಸಲು ಹವಣಿಸುತ್ತಿದೆ. ಆದರೇ ಬಿಜೆಪಿ ಕಮಿಷನ್, ಕೋಮುವಾದದಲ್ಲಿ ನಿರತವಾಗಿದೆ. ಗೃಹ ಲಕ್ಷ್ಮೀ ಯೋಜನೆ, ಉಚಿತ ವಿದ್ಯುತ್ ಬಗ್ಗೆ ಬಿಜೆಪಿಯವರು ಸುಳ್ಳು ವದಂತಿ ಹಬ್ಬಿಸುತ್ತಿದ್ದಾರೆ.

ಈ ಬಗ್ಗೆ ಯಾವುದೇ ಅನುಮಾನ ಬೇಡ. ಬಿಜೆಪಿ ತಿಂದಿರುವ ಕಮಿಷನ್ ಹಣದಲ್ಲಿ ಪ್ರತಿ ಮನೆಗೆ 200 ಯೂನಿಟ್ ಉಚಿತ ವಿದ್ಯುತ್, ಪ್ರತಿ ಕುಟುಂಬದ ಯಜಮಾನಿಗೆ 2 ಸಾವಿರ ನೀಡಬಹುದು.

ಇದು ಎಲ್ಲಿಗೂ ಹೋಗಲ್ಲ. ತೆರಿಗೆ ರೂಪದಲ್ಲಿ ಮತ್ತೆ ಸರ್ಕಾರ ಖಜಾನೆ ಸೇರುತ್ತದೆ. ಸ್ತ್ರೀಯರು ಇಲ್ಲದೇ ಹೋದ ಕುಟುಂಬದಲ್ಲಿ ಪುರುಷರಿಗೆ ಜಮೆ ಮಾಡಲಾಗುವುದು ಎಂದು ಭರವಸೆ ನೀಡಿದರು.

## ಉರಿಗೌಡ ನಂಜೇಗೌಡ ಸಿನಿಮಾದಲ್ಲಿ ನನ್ನ ಪಾತ್ರವಿಲ್ಲ: ಅಶ್ವತ್ಥನಾರಾಯಣ



ಬೆಂಗಳೂರು: ಸಚಿವ ಸಹೋದ್ಯೋಗಿ ಮುನಿರತ್ನ ಅವರು ನಿರ್ಮಿಸುತ್ತಿರುವ ಉರಿಗೌಡ ನಂಜೇಗೌಡ ಸಿನಿಮಾದಲ್ಲಿ ನನ್ನ ಪಾತ್ರವೇನೂ ಇಲ್ಲ. ಅದ-ಕ್ಕೆ ನಾನು ಚಿತ್ರಕತೆಯನ್ನೇನೂ ಬರೆಯುತ್ತಿಲ್ಲ" ಎಂದು ಸಚಿವ ಡಾ.ಸಿ ಎನ್ ಅಶ್ವತ್ಥನಾರಾಯಣ ಸ್ಪಷ್ಟಪಡಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಅವರು, "ಟಿಪ್ಪುವನ್ನು ಕೊಂದ ವೀರಸೇನಾನಿಗಳಾದ ಉರಿಗೌಡ ಮತ್ತು ನಂಜೇಗೌಡರ ಬಗ್ಗೆ ನನಗೆ ನೈಜ ಅಭಿಮಾನವಿದೆ. ಅವರ ಬಗ್ಗೆ ನಾನು ಇದುವರೆಗೂ ಆಡಿರುವ ಮಾತುಗಳಿಗೆ ನಾನು ಬದ್ಧನಾಗಿದ್ದೇನೆ. ಆದರೆ ಸಿನಿಮಾದ ಭಾಗವಾಗುತ್ತಿಲ್ಲ" ಎಂದು ಅವರು ಹೇಳಿದ್ದಾರೆ.

## ಕಣಬರಗಿ ಚೆಕ್ ಪೋಸ್ಟ್: 1.77 ಲಕ್ಷ ರೂಪಾಯಿ ನಗದು ಜಪ್ತಿ



ಬೆಳಗಾವಿ: ಇಲ್ಲಿನ ಕಣಬರಗಿ ಚೆಕ್ ಪೋಸ್ಟ್ ನಲ್ಲಿ ಫ್ಲೈಯಿಂಗ್ ಸ್ಕ್ವಾಡ್ ತಂಡವು ಭಾನುವಾರ 1.77 ಲಕ್ಷ ರೂಪಾಯಿ ಜಪ್ತಿ ಮಾಡಿಕೊಂಡಿರುತ್ತದೆ.

ಚೆಕ್ ಪೋಸ್ಟ್ ನಲ್ಲಿ ವಾಹನ ತಪಾಸಣಾ ಸಂದರ್ಭದಲ್ಲಿ ನಗದು ಪತ್ತೆಯಾಗಿರುತ್ತದೆ. ಸದರಿ ಹಣವನ್ನು ಜಿಲ್ಲಾ ಖಜಾನೆಯಲ್ಲಿ ಜಮೆ ಮಾಡಲಾಗಿದ್ದು, ಪಂಚಾಯತ ಮುಖ್ಯ ಕಾರ್ಯನಿರ್ವಾಹಕರು ಅಧ್ಯಕ್ಷರಾಗಿರುವ ತ್ರಿಸದಸ್ಯ ಸಮಿತಿಗೆ ಪ್ರಕರಣವನ್ನು ವರ್ಗಾಯಿಸಲಾಗಿರುತ್ತದೆ.

ಚುನಾವಣಾಧಿಕಾರಿ ಅಕ್ರಮ್ ಇಂಫಾಲ್, ಮಾಳಮಾರುತಿ ಪೊಲೀಸ್ ಠಾಣೆಯ ಸಿಪಿಐ, ಎಫ.ಎಸ್.ಟಿ. ತಂಡದ ಮುಖ್ಯಸ್ಥ ಪ್ರವೀಣ ಕೊರಬು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಅಕ್ರಮ ಶಸ್ತ್ರಾಸ್ತ್ರ ಹೊಂದಿದ್ದಕ್ಕೆ ಅಮೃತ್ ಪಾಲ್ ವಿರುದ್ಧ ಮತ್ತೊಂದು ಎಫ್ಐಆರ್




ಚಂಡೀಗಢ: ತೀವ್ರಗಾಮಿ ಧಾರ್ಮಿಕ ಮುಖಂಡ ಅಮೃತ್ ಸಿಂಗ್ ಪಾಲ್ ವಿರುದ್ಧ ಅಕ್ರಮ ಶಸ್ತ್ರಾಸ್ತ್ರ ಹೊಂದಿದ್ದಕ್ಕೆ ಮತ್ತೊಂದು ಎಫ್ಐಆರ್ ಭಾನುವಾರದಂದು ದಾಖಲಾಗಿದೆ.

ಅಮೃತ್ ಸರ ಗ್ರಾಮೀಣ ವಿಭಾಗದ ಹಿರಿಯ ಎಸ್ ಪಿ ಸತೀಂದ್ರ ಸಿಂಗ್ ಈ ಬಗ್ಗೆ ಮಾತನಾಡಿದ್ದು ಅಮೃತ್ ಪಾಲ್ ಅವರ ಸಹಚಾರಿಗಳನ್ನು ಶಸ್ತ್ರಾಸ್ತ್ರ ಕಾಯ್ದೆಯಡಿ ಬಂಧಿಸಲಾಗಿದೆ ಎಂದು ಹೇಳಿದ್ದಾರೆ.

ಅಮೃತ್ ಪಾಲ್ ವಿರುದ್ಧ ಪಂಜಾಬ್ ಪೊಲೀಸರು ಕಾರ್ಯಾಚರಣೆ ಆರಂಭಿಸಿದ್ದು ಆತನ 78 ಸಹಚರರು ಅಥವಾ ಆತನ ಸಂಘಟನೆಯ ಸದಸ್ಯರನ್ನು ಬಂಧಿಸಿದ್ದಾರೆ. ಅಮೃತ್ ಪಾಲ್ ನ್ನು ಸೆರೆಹಿಡಿಲು ಕಾರ್ಯಾಚರಣೆ ಮುಂದುವರೆದಿದೆ. ಅಮೃತ್ ಪಾಲ್ ಗೆ ಸಂಬಂಧಿಸಿದ 12 ಬೋರ್ ಗನ್ ಹಾಗೂ ಕೆಲವು ಕಾರ್ಟ್ರಿಜ್ಗಳನ್ನು ವಶಕ್ಕೆ ಪಡೆಯಲಾಗಿದೆ.

## ಅಕ್ರಮ ಶ್ರೀಗಂಧ ಸಾಗಾಟ: ಓರ್ವನ ಬಂಧನ



ಬೆಳಗಾವಿ: ಅಕ್ರಮವಾಗಿ ಸಾಗಿಸುತ್ತಿದ್ದ ಲಕ್ಷಾಂತರ ಮೌಲ್ಯದ 4 ಕೆ.ಜಿ ಶ್ರೀಗಂಧ ಕಟ್ಟಿಗೆಯ ತುಂಡುಗಳನ್ನು ವಶಪಡಿಸಿಕೊಂಡಿರುವ ಜಿಲ್ಲೆಯ ನಂದಗಡ ಪೊಲೀಸ ಠಾಣೆಯ ಪೊಲೀಸರು ಓರ್ವನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆನಂದ ರಾಮನ್ನವರ (27) ಬಂಧಿತ ಆರೋಪಿ. ನಂದಗಡ ಪೊಲೀಸ್ ಠಾಣಾ ವ್ಯಾಪ್ತಿಯ ಕಸಬಾ ನಂದಗಡ ಗ್ರಾಮದ ವ್ಯಾಪ್ತಿಯಲ್ಲಿ ಅಕ್ತಮವಾಗಿ ಶ್ರೀಗಂಧದ ಗಿಡದ ತುಂಡುಗಳನ್ನು ಅರಣ್ಯ ಇಲಾಖೆ ಯಾವದೇ ಅನುಮತಿ ಇಲ್ಲದೆ ಕಳ್ಳತನದಿಂದ ಅಕ್ರಮವಾಗಿ ಶ್ರೀಗಂಧದ ತುಂಡುಗಳನ್ನು ಸಾಗಿಸುವ ಬಗ್ಗೆ ಖಚಿತ ಮಾಹಿತಿ ಪಡೆದ ನಂದಗಡ ಪಿಎಸ್ ಐ ಎಚ್. ಶ್ರೀನಿವಾಸನ್, ಹಾಗೂ ಸಿಬ್ಬಂದಿಗಳಾದ (ಎನ್.ಬಿ. ಬೆಳವಡಿ, ಸಿಎಚ್‌ಸಿ 966), ಎಮ್.ಎಮ್ ಮುಲ್ಲಾ (ಸಿಎಚ್‌ಸಿ–571), ಯು.ಬಿ.ಶಿಂತ್ರಿ (ಸಿಎಚ್‌ಸಿ–2662)ನಂದಗಡ ಪೊಲೀಸ್ ಠಾಣೆಯ ಪಿಐ ಬಸವರಾಜ ಲಮಾಣಿ ಅವರ ಮಾರ್ಗದರ್ಶನದಲ್ಲಿ ದಾಳಿ ಮಾಡಿ ಆರೋಪಿ ಅಕ್ರಮವಾಗಿ ಸಾಗಿಸುತ್ತಿದ್ದ ಶ್ರೀಗಂಧ ಜಪ್ತು ಮಾಡಿಕೊಂಡಿದ್ದಾರೆ.






# ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲದವರಿಗೆ ದೇಶದಲ್ಲಿ ಜಾಗವಿಲ್ಲ: ರಾಹುಲ್ ಗಾಂಧಿಗೆ ಬಿಜೆಪಿ ಅಧ್ಯಕ್ಷ ನಡ್ಡಾ ತಿರುಗೇಟು

ನವದೆಹಲಿ: ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಅವರು ಭಾನುವಾರ ರಾಹುಲ್ ಗಾಂಧಿ ಅವರು ಪ್ರಜಾಪ್ರಭುತ್ವದ ಎಲ್ಲ ಮಿತಿಗಳನ್ನು ಮೀರಿದ್ದಾರೆ ಮತ್ತು ಅವರನ್ನು ಪ್ರಜಾಪ್ರಭುತ್ವ ರಾಷ್ಟ್ರದಿಂದ ಗಂಟುಮೂಟೆ ಕಟ್ಟಿಸಿ ದೂರಕ್ಕೆ ಕಳುಹಿಸಬೇಕು ಎಂದು ಹೇಳಿದರು.

'ಪ್ರಜಾಪ್ರಭುತ್ವದಲ್ಲಿ ನಂಬಿಕೆಯಿಲ್ಲದವರಿಗೆ ಪ್ರಜಾಪ್ರಭುತ್ವದಲ್ಲಿ ಸ್ಥಾನವಿಲ್ಲ' ಎಂದು ನಡ್ಡಾ ಅವರು ಚೆನ್ನೈನಲ್ಲಿ ನಡೆಯುತ್ತಿರುವ ತಮ್ಮ ಪಕ್ಷದ ಭಾರತೀಯ ಜನತಾ ಯುವ ಮೋರ್ಚಾದ 'ರಾಷ್ಟ್ರೀಯ ಯುವ ಸಂಸತ್' ಅನ್ನು ಉದ್ಘಾಟಿಸಿದ ನಂತರ ತಮ್ಮ ಭಾಷಣದಲ್ಲಿ ಹೇಳಿದರು.

'ಕಾಂಗ್ರೆಸ್ ಮಾನಸಿಕವಾಗಿ ದಿವಾಳಿಯಾಗಿದೆ. ಭಾರತದಲ್ಲಿ ಪ್ರಜಾಪ್ರಭುತ್ವ ಅಪಾಯದಲ್ಲಿದೆ ಎಂದು ಹೇಳುವ ಮೂಲಕ ಭಾರತದ ಆಂತರಿಕ ವ್ಯವಹಾರಗಳಲ್ಲಿ ಹಸ್ತಕ್ಷೇಪ ಮಾಡಲು ಯುಎಸ್ ಮತ್ತು ಯುರೋಪಿಯನ್ ರಾಷ್ಟ್ರಗಳಂತಹ ವಿದೇಶಿ ಶಕ್ತಿಗಳನ್ನು 'ಪ್ರಚೋದನೆ' ಮಾಡಿದ್ದಾರೆ' ಎಂದು ನಡ್ಡಾ ಆರೋಪಿಸಿದರು.

ರಾಹುಲ್ ಗಾಂಧಿ ಅವರು ಪ್ರಜಾಪ್ರಭುತ್ವದ ಎಲ್ಲ ಗಡಿಗಳನ್ನು ದಾಟಿದ್ದಾರೆ. ಅವರು ಯಾವ ರೀತಿಯ ಹೇಳಿಕೆಗಳನ್ನು ನೀಡುತ್ತಾ–ರೆ ಎಂದರೆ, ಭಾರತದ ಜನರು ಅವರ ಮಾತನ್ನು ಕೇಳುವುದಿಲ್ಲ. ಆದರೆ, ಅವರನ್ನು ಸಹಿಸಿಕೊಳ್ಳುತ್ತಾರೆ ಎಂದು ಹೇಳಿದರು.

ರಾಹುಲ್ ಗಾಂಧಿ ಅವರು ಭಾರತದ ಪ್ರಜಾಸತ್ತಾತ್ಮಕ ಮೌಲ್ಯಗಳ ಬಗ್ಗೆ ನಾಚಿಕೆಗೇಡಿನ ಹೇಳಿಕೆಗಳ ಮೂಲಕ ಕೇವಲ ರಾಷ್ಟ್ರವನ್ನು ಅವಮಾನಿಸಿಲ್ಲ. ಬದಲಿಗೆ, ನಮ್ಮ ದೇಶದಲ್ಲಿ ಮಧ್ಯಪ್ರವೇಶಿಸುವಂತೆ ವಿದೇಶಿ ರಾಷ್ಟ್ರಗಳನ್ನು ಆಹ್ವಾನಿಸಿದ್ದಾರೆ ಎಂದು ಬಿಜೆಪಿ ಅಧ್ಯಕ್ಷರು ಹೇಳಿದರು.



ಬ್ರಿಟನ್‌ನಲ್ಲಿ ರಾಹುಲ್ ಗಾಂಧಿ ನೀಡಿರುವ ಹೇಳಿಕೆಗೆ ಸಂಸತ್ತಿನಲ್ಲಿ ಕ್ಷಮೆಯಾಚಿಸಬೇಕು ಎಂದು ಆಡಳಿತ ಪಕ್ಷದ ಸದಸ್ಯರು ಪಟ್ಟುಹಿಡಿದಿದ್ದರೆ, ಕಾಂಗ್ರೆಸ್, ಬಿಜೆಪಿಯ ಆರೋಪವನ್ನು ತಿರಸ್ಕರಿಸಿದೆ. ಅದಾನಿ ವಿಷಯದಿಂದ ಗಮನವನ್ನು ಬೇರೆಡೆ ಸೆಳೆಯಲು ಬಿಜೆಪಿ ತನ್ನ ಹೇಳಿಕೆಗಳನ್ನು ತಪ್ಪಾಗಿ ಬಿಂಬಿಸುತ್ತಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ಮಾರ್ಚ್ 13 ರಂದು ಆರಂಭವಾದ ಸಂಸತ್ತಿನ ಬಜೆಟ್ ಅಧಿವೇಶನವು ಇದೇ ವಿಚಾರವಾಗಿ ಮುಂದೂಡುತ್ತಲೇ ಬಂದಿದೆ.

ಯುಕೆಯಲ್ಲಿ ತಮ್ಮ ಸಂವಾದದ ಸಂದರ್ಭದಲ್ಲಿ, ರಾಹುಲ್ ಗಾಂಧಿ ಅವರು ಭಾರತೀಯ ಪ್ರಜಾಪ್ರಭುತ್ವದ ರಚನೆಗಳು ದಾಳಿಗೆ ಒಳಗಾಗಿವೆ ಮತ್ತು ದೇಶದ ಸಂಸ್ಥೆಗಳ ಮೇಲೆ 'ಪೂರ್ಣ ಪ್ರಮಾಣದ ಆಕ್ರಮಣ' ನಡೆಯುತ್ತಿದೆ ಎಂದು ಆರೋಪಿಸಿದರು.

ಗಾಂಧಿಯವರ ಟೀಕೆಗಳು ರಾಜಕೀಯ ಕೆಸರೆರಚಾಟಕ್ಕೆ ಕಾರಣವಾಗಿದ್ದು, ಅವರು ವಿದೇಶಿ ನೆಲದಲ್ಲಿ ಭಾರತವನ್ನು ಕೆಣ–ಕುತ್ತಿದ್ದಾರೆ ಮತ್ತು ವಿದೇಶಿ ಹಸ್ತಕ್ಷೇಪಗಳನ್ನು ಬಯಸುತ್ತಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ ಮತ್ತು ಪ್ರಧಾನಿ ನರೇಂದ್ರ ಮೋದಿ ವಿದೇಶದಲ್ಲಿ ಆಂತರಿಕ ರಾಜಕೀಯವನ್ನು ಎತ್ತುವ ಉದಾಹರಣೆಗಳನ್ನು ಉಲ್ಲೇಖಿಸಿ ಕಾಂಗ್ರೆಸ್ ಆಡಳಿತ ಪಕ್ಷಕ್ಕೆ ತಿರುಗೇಟು ನೀಡಿದೆ.

# ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ 5.21 ಕೋಟಿ ರೂ. ಮೌಲ್ಯದ ಆಸ್ತಿ ಜಪ್ತಿ ಮಾಡಿದ ಇ.ಡಿ



ಬೆಂಗಳೂರು: ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದ (ಇ.ಡಿ) ಬೆಂಗಳೂರು ವಲಯ ಕಚೇರಿಯು ಮಿನರಲ್ ಎಂಟರ್‌ಪ್ರೈಸಸ್ ಲಿಮಿಟೆಡ್ ಮತ್ತು ಅದರ ಅಧಿಕಾರಿಗಳಿಗೆ ಸೇರಿದ 5.21 ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ಜಪ್ತಿ ಮಾಡಿದೆ ಎಂದು ಅಧಿಕಾರಿಗಳು ಭಾನುವಾರ ತಿಳಿಸಿದ್ದಾರೆ.

ಅಧಿಕಾರಿಗಳ ಪ್ರಕಾರ, ಜಪ್ತಿ ಮಾಡಲಾದ ಆಸ್ತಿಗಳು ಆರೋಪಿಗಳ ಒಡೆತನದ ಆರು ಸ್ಥಿರಾಸ್ತಿಗಳ ರೂಪದಲ್ಲಿವೆ.

ವಿಶೇಷ ತನಿಖಾ ತಂಡ ಮತ್ತು ಕರ್ನಾಟಕ ಲೋಕಾಯುಕ್ತ ದಾಖಲಿಸಿದ ಎಫ್‌ಐಆರ್ ಆಧಾರದ ಮೇಲೆ ಇ.ಡಿ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆಯಡಿ ತನಿಖೆ ಆರಂಭಿಸಿದೆ.

ಅಪರಿಚಿತ ಸರ್ಕಾರಿ ನೌಕರರು ಮತ್ತು ಇತರ ಅಪರಿಚಿತ ವ್ಯಕ್ತಿಗಳ ಮಿನರಲ್ ಎಂಟರ್‌ಪ್ರೈಸಸ್ ಲಿಮಿಟೆಡ್ ಅನ್ನು ಗಣಿ ಮತ್ತು ಖನಿಜಗಳ ಅಭಿವೃದ್ಧಿ ನಿಯಂತ್ರಣ ಕಾಯ್ದೆ ಮತ್ತು ಭ್ರಷ್ಟಾಚಾರ ತಡೆ ಕಾಯ್ದೆಯ ವಿವಿಧ ವಿಭಾಗಗಳ ಅಡಿಯಲ್ಲಿ ಸುಪ್ರೀಂ ಕೋರ್ಟ್ ನೀಡಿದ ನಿರ್ದೇಶನಗಳ ಆಧಾರದ ಮೇಲೆ ತನಿಖೆ ನಡೆಸಲಾಗುವುದು.

ಅಕ್ರಮವಾಗಿ ಗಣಿಗಾರಿಕೆ ಮಾಡಿದ ಕಬ್ಬಿಣದ ಅದಿರಿನ ವ್ಯಾಪಾರಕ್ಕೆ ಸಂಬಂಧಿಸಿದ ಪ್ರಕರಣ ಇದಾಗಿದೆ.

ಪಿಎಂಎಲ್‌ಎ ಅಡಿಯಲ್ಲಿ ತನಿಖೆಯ ಸಮಯದಲ್ಲಿ, ಕಬ್ಬಿಣದ ಅದಿರನ್ನು ಕಾನೂನುಬಾಹಿರವಾಗಿ ಗಣಿಗಾರಿಕೆ, ಸಾಗಣೆ ಮತ್ತು ಮಾನ್ಯ ಪರವಾನಗಿಗಳಿಲ್ಲದೆ ವ್ಯಾಪಾರ ಮಾಡಿರುವುದು ಗಮನಕ್ಕೆ ಬಂದಿದೆ. ಇದು ಬೊಕ್ಕಸಕ್ಕೆ ನಷ್ಟವನ್ನುಂಟುಮಾಡಿದೆ.

ಇಂತಹ ಅಕ್ರಮ ಕಬ್ಬಿಣದ ಅದಿರುಗಳ ಮೂಲವು ಬಿಪಿ ಆನಂದ್ ಕುಮಾರ್, ಪಾಂಡುರಂಗ ಸಿಂಗ್ ಮತ್ತು ಗೋಪಾಲ್ ಸಿಂಗ್ ಅವರನ್ನು ಪಾಲುದಾರರನ್ನಾಗಿ ಹೊಂದಿರುವ ಎಸ್‌ಬಿ ಮಿನರಲ್ಸ್ ಒಡೆತನದ ಎರಡು ಗಣಿಗಳಲ್ಲಿ, ಶಾಂತಲಕ್ಷ್ಮಿ ಮತ್ತು ಜೆ ಮಿಥಿಲೇಶ್ವರ್ ಒಡೆತನದ ಒಂದು ಗಣಿ ಹಾಗೂ ಭಾರತ್ ಮೈನ್ಸ್ ಒಡೆತನದಲ್ಲಿರುವ ಮಿನರಲ್ಸ್ ಬಿಎಂಎಂ ಇಸ್ಪಾಟ್ ಲಿಮಿಟೆಡ್ ಮತ್ತು ದಿನೇಶ್ ಕುಮಾರ್ ಸಿಂಘಿ ಅವರನ್ನು ಪಾಲುದಾರರಾಗಿ ಹೊಂದಿರುವ ಮತ್ತೊಂದು ಗಣಿಯಲ್ಲಿ ನಡೆದಿದೆ ಎಂಬ ಅಂಶವೂ ಗಮನಕ್ಕೆ ಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಹಿಂದೆ, ಕರ್ನಾಟಕ ರಾಜ್ಯದಲ್ಲಿನ ಗಣಿ ಗುತ್ತಿಗೆಗಳ ಸಮೀಕ್ಷೆಯ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ನೇಮಿಸಿದ ಕೇಂದ್ರೀಯ ಸಬಲೀಕರಣ ಸಮಿತಿಯು ಈ ನಾಲ್ಕು ಗಣಿಗಳಿಗೆ ಸಂಬಂಧಿಸಿದಂತೆ ಭಾರೀ ಅಕ್ರಮಗಳನ್ನು ಕಂಡುಹಿಡಿದಿದೆ ಮತ್ತು ಅವುಗಳನ್ನು ಸಿ ಕೆಟಗರಿಯಲ್ಲಿ ಇರಿಸಿದೆ. ಅದರ ಶಿಫಾರಸಿನ ಆಧಾರದ ಮೇಲೆ, ಸುಪ್ರೀಂ ಕೋರ್ಟ್ ಅವರ ಪರವಾನಗಿಗಳನ್ನು ರದ್ದುಗೊಳಿಸಿತು.

ಆರೋಪಿಗಳು ಸರ್ಕಾರದ ಬೊಕ್ಕಸಕ್ಕೆ ಅನುಚಿತವಾದ ನಷ್ಟ ಮತ್ತು ಕಾನೂನುಬಾಹಿರವಾದ ಲಾಭವನ್ನು ಹೊಂದಿದ್ದಾರೆ ಎಂದು ಪಿಎಂಎಲ್‌ಎ ಅಡಿಯಲ್ಲಿ ತನಿಖೆಯಿಂದ ದೃಢಪಟ್ಟಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಸ್ವಾಮಿ ವಿವೇಕಾನಂದ ಯುವಶಕ್ತಿ ಸಂಘ ಯೋಜನೆಗೆ ಮಾ.23ಕ್ಕೆ ಸಿಎಂ ಬೊಮ್ಮಾಯಿ ಚಾಲನೆ

ಬೆಂಗಳೂರು: ಸ್ವಾಮಿ ವಿವೇಕಾನಂದ ಯುವಶಕ್ತಿ ಸಂಘ ಯೋಜನೆಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಇದೇ ತಿಂಗಳ 23 ರಂದು ಚಾಲನೆ ನೀಡಲಿದ್ದಾರೆ. ಈ ಕುರಿತು ಇಂದು ಮುಖ್ಯಮಂತ್ರಿಯವರು ಸರ್ಕಾರದ ಹಿರಿಯ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಸಭೆ ನಡೆಸಿ ಸಂಘಗಳ ರಚನೆಯ ಪ್ರಗತಿಯ ಕುರಿತು ಮಾಹಿತಿ ಪಡೆದರು.

ಸ್ತ್ರೀಶಕ್ತಿ ಸ್ವಸಹಾಯ ಗುಂಪುಗಳು ಬಹಳ ವರ್ಷಗಳಿಂದ ಸಕ್ರಿಯವಾಗಿವೆ. ಆದರೆ ಯುವಕರಿಗಾಗಿ ಮೊದಲ ಬಾರಿಗೆ ಸ್ವ–ಉದ್ಯೋಗ ಕೈಗೊಳ್ಳಲು ಇಂತಹ ಯೋಜನೆಯನ್ನು ರೂಪಿಸಲಾಗಿದ್ದು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹೆಚ್ಚಿನ ಆದ್ಯತೆಯೊಂದಿಗೆ ಕಾರ್ಯನಿರ್ವಹಿಸಬೇಕು. ಜಂಟಿ ಬಾಧ್ಯತಾ ಗುಂಪುಗಳ ರಚನೆಯಾಗಿ, ಸುತ್ತು ನಿಧಿ ಹಂಚಿಕೆಯೊಂದಿಗೆ ನಿಮ್ಮ ಕೆಲಸ ಮುಗಿಯುವುದಿಲ್ಲ. ಈ ಗುಂಪುಗಳು ಯೋಜನೆಯನ್ನು ಗುರುತಿಸಿ, ಬ್ಯಾಂಕಿನಿಂದ ಸಾಲ ಸೌಲಭ್ಯ ಪಡೆದು, ತಮ್ಮ ಉದ್ದಿಮೆಯನ್ನು ಸ್ಥಾಪಿಸಿ, ಉತ್ಪಾದನೆ ಪ್ರಾರಂಭಿಸುವ



ವರೆಗೂ ನೀವು ಅವರಿಗೆ ಮಾರ್ಗದರ್ಶನ ನೀಡಬೇಕಾಗಿದೆ ಎಂದು ಸೂಚಿಸಿದರು.

ಯೋಜನೆಗಳನ್ನು ಗುರುತಿಸಲು ನಿಯೋಜಿಸಿರುವ ಸಮಾಲೋಚಕರು, ಯುವಕರು ಕೈಗೊಳ್ಳುವ ಯೋಜನೆಗೆ ಅನುಗುಣವಾಗಿ, ಆಯಾ ಕ್ಷೇತ್ರದ ಪರಿಣತರಿಂದಲೇ ತರಬೇತಿ ನೀಡಬೇಕು. ಆಗ ಮಾತ್ರ ಯೋಜನೆ ಯಶಸ್ವಿಯಾಗಲು ಸಾಧ್ಯ ಎಂದು ತಿಳಿಸಿದರು. ಯುವಶಕ್ತಿ ಸಂಘಗಳಿಗೆ ಸಾಲ ನೀಡುವಾಗ, ಯೋಜನಾ ಮೊತ್ತ ಹೆಚ್ಚಾಗಿದ್ದು, ಅವು ಲಾಭದಾಯಕ ಯೋಜನೆಗಳಾದರೆ, ಬ್ಯಾಂಕುಗಳು ಸರ್ಕಾರ ನಿಗದಿಪಡಿಸಿದ 5 ಲಕ್ಷ ರೂ. ಮಿತಿಗಿಂತ ಹೆಚ್ಚಿನ ಮೊತ್ತದ ಸಾಲ ಮಂಜೂರು ಮಾಡಿ, ಯುವಕರನ್ನು ಬೆಂಬಲಿಸಬೇಕೆಂದು ಮುಖ್ಯಮಂತ್ರಿಗಳು ಬ್ಯಾಂಕರುಗಳಿಗೆ ಸಲಹೆ ನೀಡಿದರು.

ಯುವ ಸಬಲೀಕರಣ, ಕ್ರೀಡೆ ಮತ್ತು ರೇಷ್ಮೆ ಸಚಿವ ನಾರಾಯಣ ಗೌಡ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎನ್. ಮಂಜುನಾಥ್ ಪ್ರಸಾದ್ ಮತ್ತಿತರ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡರು.

ಯೋಜನೆಯ ಈ ವರೆಗಿನ ಪ್ರಗತಿ: ರಾಜ್ಯದಲ್ಲಿ ಒಟ್ಟು 5, 951 ಗ್ರಾಮ ಪಂಚಾಯತಿಗಳಿದ್ದು, ಸ್ವಾಮಿ ವಿವೇಕಾನಂದ ಯುವ ಶಕ್ತಿ ಯೋಜನೆಯಡಿ, ಪ್ರತಿ ಗ್ರಾಮ ಪಂಚಾಯತಿಗೆ ಎರಡು ಜಂಟಿ ಬಾಧ್ಯತಾ ಗುಂಪುಗಳನ್ನು ರಚಿಸಲು ಆರ್ಥಿಕ ಇಲಾಖೆಯ ಸಹಮತಿಯನ್ವಯ ಇದೇ ತಿಂಗಳ 8 ರಂದು ಆದೇಶ ಹೊರಡಿಸಲಾಗಿದೆ. ಅದರನ್ವಯ ಮಾ.18ರ ಅಂತ್ಯಕ್ಕೆ ಒಟ್ಟು 6, 509 ಜಂಟಿ ಬಾಧ್ಯತಾ ಗುಂಪುಗಳು ರಚನೆಯಾಗಿರುತ್ತದೆ. ಉಳಿದಂತೆ 5, 393 ಜಂಟಿ ಬಾಧ್ಯತಾ ಗುಂಪುಗಳು ರಚನೆಯಾಗಬೇಕಾಗಿದೆ.

ಈಗಾಗಲೇ , 754 ಜಂಟಿ ಭಾದ್ಯತಾ ಗುಂಪುಗಳಿಗೆ ತಲಾ ರೂ.10,000/–ಗಳಂತೆ ಒಟ್ಟು ರೂ.1.75ಕೋಟಿಗಳ ವೆಚ್ಚದಲ್ಲಿ ಸುತ್ತು ನಿಧಿಯನ್ನು ಪಾವತಿಸಲಾಗಿದೆ. 100 ಮಾದರಿ ಪ್ರಸ್ತಾವನೆಗಳನ್ನು ಬ್ಯಾಂಕ್‌ಗಳಿಗೆ ಸಲ್ಲಿಸಲಾಗಿದ್ದು, ಈ ಪೈಕಿ ಸುಮಾರು 551 ಯೋಜನೆಗಳನ್ನು ಬ್ಯಾಂಕುಗಳ ಅನುಮೋದನೆ ಮತ್ತು ಸಾಲ ಮಂಜೂರಾತಿಗಾಗಿ ಸಲ್ಲಿಸಲಾಗಿದೆ.

ಸ್ವಾಮಿ ವಿವೇಕಾನಂದ ಯುವ ಶಕ್ತಿ ಯೋಜನೆಯ ಬ್ಯಾಂಕ್ ಲಿಂಕೇಜ್, ಖಾತೆ ತೆರೆಯುವಿಕೆ ಮತ್ತು ಬ್ಯಾಂಕ್ ಸಾಲಕ್ಕೆ ಸಂಬಂಧಿಸಿದ ಚಟುವಟಿಕೆಗಳನ್ನು ಕೈಗೊಳ್ಳಲು ಸಾಮಾನ್ಯ ಸರ್ವಿಸ್ ಸೆಂಟರ್, ಭಾರತೀಯ ಸ್ಟೇಟ್ ಬ್ಯಾಂಕ್ ಹಾಗೂ ಎನ್.ಎಲ್.ಎಂ. ನಿಂದ ಹಾಗೂ ಬ್ಯಾಂಕರ್ಸ್‌ಗಳಿಂದ ಒಟ್ಟು 7, 300 ಬಿ.ಸಿ. ಸಖಿಗಳ ಸೇವೆಯನ್ನು ಪಡೆಯಲಾಗುತ್ತಿದ್ದು, ಸದರಿಯವರಿಗೆ ರಾಷ್ಟ್ರೀಕೃತ ಬ್ಯಾಂಕ್‌ನಿಂದ ರೂ.2000/– ಹಾಗೂ ಸಹಕಾರಿ ಬ್ಯಾಂಕ್‌ಗಳಿಂದ ರೂ.4000/– ಪ್ರೋತ್ಸಾಹ ಧನ ನೀಡಲಾಗುತ್ತಿದೆ.

# ಯುವಕರು ಸಂಶೋಧನೆಯತ್ತ ಗಮನಹರಿಸಬೇಕು: ಸಿಎಂ




ಬೆಂಗಳೂರು: ವಿಜ್ಞಾನ ಮತ್ತು ಆಧ್ಯಾತ್ಮ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ವಿಜ್ಞಾನದಲ್ಲಿ ಸಂಶೋಧನೆಗೆ ಸಾಕಷ್ಟು ಅವಕಾಶಗಳವೆ. ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು, ಸಂಶೋಧಕರು ವಿಜ್ಞಾನ ಕ್ಷೇತ್ರದಲ್ಲಿ ಹೆಚ್ಚಿನ ಸಂಶೋಧನೆಗೆ ಗಮನಹರಿಸಬೇಕು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಶನಿವಾರ ಹೇಳಿದರು.

ಶನಿವಾರ ನಗರದ ಸಂಜಯನಗರದ ಪಶುವೈದ್ಯ ಕಾಲೇಜು ಆವರಣದಲ್ಲಿ ನಿರ್ಮಿಸಲಾಗಿರುವ ಅತ್ಯಾಧುನಿಕ ಸೌಲಭ್ಯಗಳುಳ್ಳ ವಿಜ್ಞಾನ ಗ್ಯಾಲರಿ ಬೆಂಗಳೂರು ಸಂಕೀರ್ಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮನುಷ್ಯ ಇರುವವರೆಗೆ ಮಾಡಿರುವ ಸಾಧನೆಗಳಿಗೆ ಬಳಸಿರುವುದು ತನ್ನ ಮೆದುಳಿನ ಶೇ.25ರಷ್ಟು ಶಕ್ತಿ, ಸಾಮರ್ಥ್ಯ ಮಾತ್ರ. ಅಂದರೆ, ಮನುಷ್ಯನ ಮಿದುಳು ಇನ್ನೂ ಶೇ.75ರಷ್ಟು ವಿಸ್ತೃತವಾಗಿದೆ. ಮೆದುಳಿನ ಸಾಮರ್ಥ್ಯವನ್ನು ಶೇ.100ರಷ್ಟು ಬಳಸಿಕೊಂಡು ಸಂಸೋಧನೆಗಳನ್ನು ನಡೆಸಿದರೆ ಇನ್ನ ಏನೆಲ್ಲಾ ಸೃಷ್ಟಿಸಬಹುದು ಎಂಬುದನ್ನು ಊಹಿಸಲೂ ಸಾಧ್ಯವಿಲ್ಲ ಎಂದರು ಹೇಳಿದರು.

ನಮ್ಮ ಶಿಕ್ಷಣ ಸಂಸ್ಥೆಗಳು, ವಿದ್ಯಾರ್ಥಿಗಲು ಹಾಗೂ ಸಂಶೋಧನೆಗಳಲ್ಲಿ ಆಸಕ್ತಿ ಇರುವವರು ವಿಜ್ಞಾನ ಕ್ಷೇತ್ರದಲ್ಲಿ ಮತ್ತಷ್ಟು ಹೊಸ ಸಂಶೋಧನೆಗೆ ಮುಂದಾಗಬೇಕು. ಇಂದು ಶಿಕ್ಷಣ ಮತ್ತು ಉದ್ಯೋಗದಲ್ಲಿ ವಿಜ್ಞಾನದ ಪಾರಮ್ಯವಿದೆ. ಆದರೆ, ಮೂಲ ವಿಜ್ಞಾನ, ಹಿಂದಕ್ಕೆ ಸರಿಯುತ್ತಿದೆ. ವಾಸ್ತವವಾಗಿ ಮೂಲ ವಿಜ್ಞಾನ ಮತ್ತು ಸಂಶೋಧನೆಗಳು ನಮ್ಮ ಬದುಕಿನ ಮತ್ತು ಚಿಂತನೆಯ ಭಾಗವಾಗಬೇಕು. ವಿಜ್ಞಾನದ ಲಾಭವು ಶ್ರೀ ಸಾಮಾನ್ಯವನ್ನು ತಲುಪಬೇಕು ಎಂದು ತಿಳಿಸಿದರು.

ವಿಜ್ಞಾನ ಗ್ಯಾಲರಿ, ಸಾರ್ವಜನಿಕರಿಗೆ ವಿಜ್ಞಾನ ಮತ್ತು ಸಂಸ್ಕೃತಿಯ ಬಗ್ಗೆ ಜ್ಞಾನದ ಮತ್ತೊಂದು ಮೂಲವಾಗಲಿದೆ. ಸರ್ಕಾರವು ಸಾರ್ವಜನಿಕರಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ ಮತ್ತು ಹೊಸದಾಗಿ ಉದ್ಘಾಟನೆಗೊಂಡ ಗ್ಯಾಲರಿ ಈ ಉದ್ದೇಶಕ್ಕೆ ಉತ್ತೇಜನ ನೀಡಲಿದೆ ಎಂದರು.

ಸಚಿವ ಡಾ.ಸಿ.ಎನ್.ಅಶ್ವತ್ಥ್ ನಾರಾಯಣ್ ಅವರು ಮಾತನಾಡಿ, ಬೆಂಗಳೂರು ನಗರವು ದೇಶದ ವಿಜ್ಞಾನ ಮತ್ತು ತಂತ್ರಜ್ಞಾನಗಳ ರಾಜಧಾನಿಯಾಗಿದೆ. ಇಂತಹ ನಗರದಲ್ಲಿ ಸರ್ಕಾರ ವಿಜ್ಞಾನ ಗ್ಯಾಲರಿ ಸ್ಥಾಪಿಸಿರುವುದು ಈ ಕ್ಷೇತ್ರದಲ್ಲಿ ಹೊಸ ಹೊಸ ಸಂಶೋಧನೆಗಳಿಗೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಗ್ಯಾಲರಿಯನ್ನು ಲಾಭೋದ್ದೇಶವಿಲ್ಲದ ಸಾರ್ವಜನಿಕ ಸಂಸ್ಥೆಯಾಗಿ ಸ್ಥಾಪಿಸಲಾಗಿದೆ, ಅಲ್ಲಿ ಯುವಕರು ವಿಜ್ಞಾನದ ಸಂಶೋಧನೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬಹುದು. ಗ್ಯಾಲರಿಯು ಮೂರು ಶೈಕ್ಷಣಿಕ ಸಂಸ್ಥೆ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ (IISc), ಜೈವಿಕ ವಿಜ್ಞಾನಗಳ ರಾಷ್ಟ್ರೀಯ ಕೇಂದ್ರ (NCBS), ಮತ್ತು ಸೃಷ್ಟಿ ಇನ್ಸ್ಟಿಟ್ಯೂಟ್ ಆಫ್ ಆರ್ಟ, ಡಿಸೈನ್ ಆ್ಯಂಡ್ ಟೆಕ್ನಾಲಜಿಗಳೊಂದಿಗೆ ಸಹಭಾಗಿತ್ವ ಹೊಂದಿದೆ.

# ಅಮಿತ್ ಶಾ ಭೇಟಿಯಾದ ರಮೇಶ್ ಜಾರಕಿಹೊಳಿ



ಬೆಳಗಾವಿ: ಗೋಕಾಕ ಶಾಸಕ ರಮೇಶ ಜಾರಕಿಹೊಳಿ ಅವರು ಶುಕ್ರವಾರ ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದು, ಈ ಬೆಳವಣಿಗೆ ಹಲವರ ಹುಬ್ಬೇರುವಂತೆ ಮಾಡಿದೆ.

ಅಮಿತ್ ಶಾ ಭೇಟಿ ಬಳಿಕ ಪ್ರತಿಕ್ರಿಯೆ ನೀಡಿದ ರಮೇಶ್ ಜಾರಕಿಹೊಳಿಯವರು, ರಾಜ್ಯದಲ್ಲಿ ವಿಧಾನಸಭಾ ಚುನಾವಣೆ ಹತ್ತಿರ ಬರುತ್ತಿರುವ ರಾಜಕೀಯ ಬೆಳವಣಿಗೆಗಳ ಕುರಿತು ಅಮಿತ್ ಶಾ ಅವರೊಂದಿಗೆ ಸುದೀರ್ಘ ಚರ್ಚೆ ನಡೆಸಿದೆ ಎಂದು ಹೇಳಿದರು. ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಬಿಜೆಪಿಯ ಭವಿಷ್ಯ ಮತ್ತು ಬೆಳಗಾವಿ ಜಿಲ್ಲೆಯ 18 ಕ್ಷೇತ್ರಗಳಲ್ಲಿನ ಬೆಳವಣಿಗೆಗಳ ಬಗ್ಗೆ ಶಾ ಅವರೊಂದಿಗೆ ಮಾಹಿತಿ ಹಂಚಿಕೊಂಡಿದ್ದೇನೆಂದು ತಿಳಿಸಿದರು.

ವಿಶೇಷವಾಗಿ ಬೆಳಗಾವಿ ಪ್ರದೇಶದ ಕ್ಷೇತ್ರಗಳಲ್ಲಿ ಬಿಜೆಪಿ ಮೇಲುಗೈ ಸಾಧಿಸಲು ಅನುಸರಿಸಬಹುದಾದ ರಾಜಕೀಯ ತಂತ್ರಗಳ ಬಗ್ಗೆಯೂ ಚರ್ಚೆ ನಡೆಸಿದೆ. ಆದರೆ, ಸಭೆಯಲ್ಲಿ ಚರ್ಚೆಯಾದ ಕೆಲವು ಗೌಪ್ಯ ವಿಚಾರಗಳನ್ನು ಬಹಿರಂಗಪಡಿಸುವುದಿಲ್ಲ ಎಂದು ಹೇಳಿದರು.

ಈ ನಡುವೆ ಕರ್ನಾಟಕ ಚುನಾವಣಾ ಉಸ್ತುವಾರಿ ಧರ್ಮೇಂದ್ರ ಪ್ರಧಾನ್ ಅವರು ಬೆಳಗಾವಿಯಲ್ಲಿ ಇತ್ತೀಚೆಗೆ ಕರೆದಿದ್ದ ಸಭೆಯಲ್ಲಿ ಬಿಜೆಪಿಯ ಹಲವು ಶಾಸಕರು ತಮ್ಮ ವಿರುದ್ಧ ದೂರು ಸಲ್ಲಿಸಿದ ಹಿನ್ನೆಲೆಯಲ್ಲಿ ರಮೇಶ್ ಜಾರಕಿಹೊಳಿ ಅವರು ದೆಹಲಿಯಲ್ಲಿ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದರು ಎಂದು ಮೂಲಗಳು ತಿಳಿಸಿವೆ. ಬೆಳಗಾವಿಯ ಎಲ್ಲಾ ಬಿಜೆಪಿ ಶಾಸಕರು ಮತ್ತು ಸಂಸದರು ಧರ್ಮೇಂದ್ರ ಪ್ರಧಾನ್ ಅವರು ನಡೆಸಿದ್ದ ಸಭೆಯಲ್ಲಿ ಭಾಗವಹಿಸಿದ್ದು, ಈ ವೇಳೆ ಹಲವು ನಾಯಕರು ತಮ್ಮ ತಮ್ಮ ವಿಧಾನಸಭಾ ಕ್ಷೇತ್ರಗಳ ವ್ಯವಹಾರಗಳಲ್ಲಿ ರಮೇಶ್ ಹಸ್ತಕ್ಷೇಪ ಮಾಡುತ್ತಿರುವ ಕುರಿತು ದೂರು ನೀಡಿದ್ದಾರೆಂದು ತಿಳಿದುಬಂದಿದೆ,

ಚುನಾವಣೆ ಹತ್ತಿರ ಬರುತ್ತಿರುವ ಹಿನ್ನೆಲೆಯಲ್ಲಿ ಈ ಸಂದರ್ಭದಲ್ಲಿ ಜಾರಕಿಹೊಳಿ ಅವರ ಹಸ್ತಕ್ಷೇಪಕ್ಕೆ ಪಕ್ಷದ ಶಾಸಕರು ಆಕ್ಷೇಪ ವ್ಯಕ್ತಪಡಿಸಿದ್ದು, ಇದು ಚುನಾವಣೆ ಸಿದ್ಧತೆಗಳ ಮೇಲೆ ಪರಿಣಾಮ ಬೀರಲಿದೆ ಎಂದು ಹೇಳಿಕೊಂಡಿದ್ದಾರೆಂದು ತಿಳಿದುಬಂದಿದೆ. ಇದೇ ವೇಳೆ ಬಿಜೆಪಿಯ ಇಬ್ಬರು ಶಾಸಕರು ರಮೇಶ್ ಅವರನ್ನು ಪಕ್ಷದಿಂದ ಉಚ್ಚಾಟಿಸುವಂತೆ ಪ್ರಧಾನ್ ಅವರಿಗೆ ಒತ್ತಾಯಿಸಿದ್ದು, ಅವರ ನಿರ್ಗಮನದಿಂದ ಪಕ್ಷಕ್ಕೆ ಹೆಚ್ಚು ಲಾಭವಾಗುತ್ತದೆ ಎಂದು ತಿಳಿಸಿದ್ದಾರೆಂದು ಎಂದು ಮೂಲಗಳು ತಿಳಿಸಿವೆ.

ಆದರೆ, ರಮೇಶ್ ಜಾರಕಿಹೊಳಿ ಕೂಡ ಪ್ರಧಾನ್ ಅವರನ್ನು ಭೇಟಿಯಾಗಿ ಸುದೀರ್ಘ ಚರ್ಚೆ ನಡೆಸಿದ್ದಾರೆಂದು ತಿಳಿದುಬಂದಿದೆ. ಇದೇ ವೇಳೆ ರಮೇಶ ಜಾರಕಿಹೊಳಿ ಹಾಗೂ ಬೆಳಗಾವಿ ಗ್ರಾಮೀಣ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ನಡುವಿನ ರಾಜಕೀಯ ಪೈಪೋಟಿ ತಾರಕಕ್ಕೇರಿದ್ದು, ಗೋಕಾಕ್ ಹಾಗೂ ಬೆಳಗಾವಿ ಗ್ರಾಮಾಂತರ ಕ್ಷೇತ್ರಗಳಲ್ಲಿ ಉಭಯ ನಾಯಕರು ಪರಸ್ಪರರನ್ನು ಸೋಲಿಸುವ ಯತ್ನದಲ್ಲಿ ನಿರತರಾಗಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಹೆಬ್ಬಾಳ್ಕರ್ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ ಕೆ ಶಿವಕುಮಾರ್ ಅವರ ಬೆಂಬಲಿಗರ ಒಂದು ವಿಭಾಗವು ರಮೇಶ್ ಅವರನ್ನು ಅವರ ತವರು ಗೋಕಾಕ್‌ನಲ್ಲಿ ಸೋಲಿಸಲು ಪ್ರಯತ್ನ ನಡೆಸುತ್ತಿದ್ದಾರೆಂದು ಎಂದು ಮೂಲಗಳು ತಿಳಿಸಿವೆ.

# ಎರಡು ಶವಗಳು ಪತ್ತೆ



ವಿಜಯಪುರ: ಜಿಲ್ಲೆಯ ತಿಕೋಟಾ ಪಟ್ಟಣದ ಸಿದ್ಧಾಪುರ ಗ್ರಾಮದಲ್ಲಿ ನಡದಿರುವ ಘಟನೆ ಅಪರಿಚಿತ ಯುವಕ, ಯುವತಿಯರ ಶವ ಪತ್ತೆಯಾಗಿದೆ.

ಇದು ಆತ್ಮಹತ್ಯೆಯೋ ಅಥವಾ ಕೊಲೆಯೋ ಎಂಬುದು ಪೊಲೀಸ ತನಿಖೆಯ ಬಳಿಕ ತಿಳಿದು ಬರಬೇಕಿದೆ ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ ವಿಜಯಪುರ ಜಿಲ್ಲೆಯಲ್ಲಿ ನಡೆದಿರುವ ದುರ್ಘಟನೆ ಸಾರ್ವಜನಿಕರನ್ನು ಬೆಚ್ಚಿ ಬಿಳಿಸಿರುವ ರೀತಿಯಲ್ಲಿ ನಡೆದಿದೆ.

# ಮಹಿಳೆಯರು ತಮ್ಮ ಆರೋಗ್ಯದತ್ತ ಹೆಚ್ಚಿನ ಗಮನ ಹರಿಸಬೇಕು

ಬೆಳಗಾವಿ: "ಮಹಿಳೆಯರು ಮನೆಯ ಒಳಗೂ, ಹೊರಗೂ ನಿರಂತರ ದುಡಿಯುತ್ತಿರುತ್ತಾರೆ. ಅಂಥ ಮಹಿಳೆಯರು ತಮ್ಮ ಆರೋಗ್ಯದತ್ತ ಹೆಚ್ಚಿನ ಗಮನ ಹರಿಸಬೇಕು" ಎಂದು ಸ್ತ್ರೀರೋಗ ತಜ್ಞೆ ಡಾ. ಅನಿತಾ ಉಮುದಿ ಅಭಿಪ್ರಾಯ ಪಟ್ಟರು.

ಖಾನಾಪುರ ರಸ್ತೆಯ ನ್ಯೂ ಉದಯ ಭವನದಲ್ಲಿ ಕ್ರಾಂತಿ ಮಹಿಳಾ ಮಂಡಳ ಹಾಗೂ ಉಮಾ ಸಂಗೀತ ಪ್ರತಿಷ್ಠಾನ ಸಂಸ್ಥೆಗಳ ವತಿಯಿಂದ ಜರುಗಿದ 'ಅಂತರರಾಷ್ಟೀಯ ಮಹಿಳಾ ದಿನಾಚರಣೆ'ಯಲ್ಲಿ ಮುಖ್ಯ ಅತಿ–ಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, "ಮಹಿಳೆಯರ ಸ್ಥನ ಕ್ಯಾನ್ಸರ್



ಹಾಗೂ ಗರ್ಭಾಶಯ ಕ್ಯಾನ್ಸರ್ ಕುರಿತು ತೆಗೆದುಕೊಳ್ಳಬೇಕಾದ ಕಾಳಜಿ ಕುರಿತು ಹೇಳಿದ ಅವರು ಇತ್ತೀಚಿನ ಆಹಾರ ಪದ್ಧತಿಯಿಂದ ಇತ್ತೀಚಿನ ದಿನಗಳಲ್ಲಿ ಹೆಣ್ಣು ಮಕ್ಕಳು ಬೇಗ ಋತುಮತಿಯಾಗುತ್ತಿದ್ದಾರೆ. ಹೀಗಾಗಿ ಆದಷ್ಟು ರಾಸಾಯನಿಕ ಯುಕ್ತ ಆಹಾರದಿಂದ ದೂರವಿರಬೇಕು " ಎಂದು ಹೇಳಿದರು.

ಜಾನ್ವಿ ಕಲ್ಯಾಣ ಶೆಟ್ಟಿ ಅವರು ಮಹಿಳೆಯರಿಗೆ ಬೇಸಿಕ್ ಮೇಕಪ್ ಕುರಿತು ಪ್ರಾತ್ಯಕ್ಷಿಕತೆ ನಡೆಸಿಕೊಟ್ಟರು.

ಶ್ರೀಮತಿ ಮಧು ಮಹೇಶ ಜಾದವ ಹಾಗೂ ಶ್ರೀಮತಿ ತುಳಸಾ ವೆಂಕಟೇಶ ಪಾಟೀಲ ದಂಪತಿಗಳಿಗೆ ಆದರ್ಶ ದಂಪತಿ ಅವಾರ್ಡ್ ನೀಡಿ ಗೌರವಿಸಲಾಯಿತು. ಶ್ರೀಮತಿ ಸರ್ವ ಮಂಗಳಾ ಪಾಟೀಲ ಶ್ರೀಮತಿ ವರ್ಷಾ ಉಲ್ಲಾಸ ಶಾನಬಾಗ, ಶ್ರೀಮತಿ ಆಶಾ ನಿಲಜಗಿ ಇವರಿಗೆ ವಿಶೇಷ ಸನ್ಮಾನ ಮಾಡಲಾಯಿತು.

ತಿಂಗಳ ಪ್ರಾಯೋಜಕರಾದ ಮಂದಾಕಿನಿ ನೇರ್ಲೇಕರ ಸುನೀತಾ ಗುಳ್ಳ ಪ್ರಾರ್ಥಿಸಿದರು. ಮಂಡಳದ ಅಧ್ಯಕ್ಷೆ ಮಂಗಲ ಮಠದ ಅವರು ಸ್ವಾಗತಿಸಿದರು. ಕಾರ್ಯದರ್ಶಿ ರತ್ನಶ್ರೀ ಗುಡೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಸ್ತೂರಿ ಗುರವ, ಸುಶೀಲಾ ಗುರವ ಅತಿಥಿ ಪರಿಚಯ ಮಾಡಿದರು. ಅಂಜನಾ ಕಿತ್ತೂರ ನಿರೂಪಿಸಿದರು.

# ಎಲ್ಲ ಸಮಾಜಗಳು ಸಹೋದರತ್ವ ಭಾವನೆಗಳಿಂದ ನಡೆದಾಗ ಮಾತ್ರ ಅಭಿವೃದ್ದಿ ಸಾಧ್ಯ: ಶಾಸಕ ಬಾಲಚಂದ್ರ ಜಾರಕಿಹೊಳಿ

ಘಟಪ್ರಭಾ: ನಿಮ್ಮ ಸಮಾಜವನ್ನು ಪ್ರೀತಿಸುವುದರ ಜೊತೆಗೆ ಮತ್ತೊಂದು ಸಮಾಜದವರ ಬಗ್ಗೆ ಗೌರವ, ಆದರ ಇಟ್ಟುಕೊಳ್ಳಬೇಕು. ಸಮಾಜದಲ್ಲಿ ಪ್ರತಿ ಜಾತಿಗಳು ಸಹೋದರತ್ವ ಮನೋಭಾವನೆಯಿಂದ ನಡೆದುಕೊಂಡಾಗ ಮಾತ್ರ ಎಲ್ಲ ಸಮುದಾಯಗಳು ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ ಎಂದು ಅರಭಾವಿ ಶಾಸಕ, ಕೆಎಮ್‌ಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಶನಿವಾರದಂದು ಸಮೀಪದ ಅರಭಾವಿ (ಗುಡ್ಡದವಾರಿ) ಪಟ್ಟಣದಲ್ಲಿ ಜರುಗಿದ ದಲಿತ ಬೃಹತ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಎಸ್.ಸಿ/ಎಸ್.ಟಿ ಸಮುದಾಯದ ಸರ್ವಾಂಗೀಣ ಅಭಿವೃದ್ದಿಗೆ ಬದ್ಧರಿರುವುದಾಗಿ ಹೇಳಿದರು.

ಸಮಾಜದಲ್ಲಿರುವ ಕಟ್ಟಕಡೆಯ ವ್ಯಕ್ತಿಗೆ ಸರ್ಕಾರದ ಸೌಲಭ್ಯಗಳು ಸಿಗುವಂತಾಗಬೇಕು. ನೇರವಾಗಿ ಫಲಾನುಭವಿಗಳಿಗೆ ಯೋಜನೆಗಳು ಮುಟ್ಟಬೇಕು. ಅದರಲ್ಲೂ ಬಡಕುಟುಂಬಗಳನ್ನು ಗುರುತಿಸುವ ಕೆಲಸ ಆಗಬೇಕಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಶ್ರೇಯೋಭಿವೃದ್ದಿಗೆ ನಮ್ಮ ಸರ್ಕಾರ ಸದಾ ಸಿದ್ದವಿದೆ. ಈ ದಿಸೆಯಲ್ಲಿ ಹತ್ತು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ತಿಳಿಸಿದರು.

2004ರಿಂದ ಅರಭಾವಿ ಭಾಗದ ಶಾಸಕನಾಗಿ ಆಯ್ಕೆಯಾಗುತ್ತಾ ಬಂದಿರುವ ನನಗೆ ಜನರ ಆಶೀರ್ವಾದದಿಂದ ನಮ್ಮ ಶಕ್ತಿ ವೃದ್ದಿಯಾಗುತ್ತಿದೆ. ಅದು ಸಾಮಾಜಿಕವಾಗಲಿ ಅಥವಾ ರಾಜಕೀಯವಾಗಲಿ ಎಲ್ಲ ಹಂತಗಳಲ್ಲೂ ಜನರು ನಮಗೆ ದೊಡ್ಡ ಶಕ್ತಿಯಾಗಿ ನಿಂತಿದ್ದಾರೆ. ಕೆಲವೇ ದಿನಗಳಲ್ಲಿ ಬರಲಿರುವ ಚುನಾವಣೆಯಲ್ಲಿ ಈ ಬಾರಿಯೂ ನನಗೆ ತಮ್ಮ ಅಮೂಲ್ಯವಾದ ಮತವನ್ನು ನೀಡಿ ಆಶೀರ್ವಾದ ಮಾಡಬೇಕು. ನಿಮ್ಮ ಮನೆಯ ಅಕ್ಕ–ಪಕ್ಕದ ಕುಟುಂಬದವರಿಗೂ ಬಿಜೆಪಿ ಮತ ನೀಡುವಂತೆ ಪ್ರೇರಣೆ ನೀಡಬೇಕು. ಬೇರೆ ಪಕ್ಷಗಳಿಗೆ ಮತ ಹೋಗದಂತೆ ನಮ್ಮ



ಕಾರ್ಯಕರ್ತರು ಮತದಾರರನ್ನು ಮನವೊಲಿಸುವ ಕೆಲಸ ಮಾಡುವಂತೆ ಹೇಳಿದರು.

ಬಿಜೆಪಿ ಅಧಿಕಾರಕ್ಕೆ ಬಂದ ಮೇಲೆ ಎಸ್.ಸಿ/ಎಸ್.ಟಿ ಸಮುದಾಯದ ಒಳ ಪಂಗಡಗಳಿಗೆ ಅನುಕೂಲವಾಗಲು ಸಾಕಷ್ಟು ಕೆಲಸ ಮಾಡಿದೆ. ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾದ ನಂತರ ಈ ಸಮುದಾಯಗಳ ಪ್ರಮುಖ ಬೇಡಿಕೆಯನ್ನು ಈಡೇರಿಸಿದ್ದಾರೆ. ಮೀಸಲಾತಿ ಪ್ರಮಾಣವನ್ನು ಹೆಚ್ಚಳ ಮಾಡುವ ಮೂಲಕ ಈ ಸಮುದಾಯಗಳಿಗೆ ಆಶಾಕಿರಣರಾಗಿದ್ದಾರೆ. ಮುಂದೆಯೂ ಸಹ ರಾಜ್ಯದಲ್ಲಿ ನಮ್ಮ ಪಕ್ಷವೇ ಸ್ವಂತ ಬಲದಿಂದ ಅಧಿಕಾರಕ್ಕೆ ಬರಲಿದ್ದು ಇನ್ನಷ್ಟು ಅಭಿವೃದ್ದಿ ಕಾರ್ಯಗಳು ಶರವೇಗದಲ್ಲಿ ನಡೆಯಲಿವೆ ಎಂದು ತಿಳಿಸಿದರು.

ಡಾ॥ ಅಂಬೇಡ್ಕರ ಅವರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಬೇಕು. ಅವರು ಬೋಧಿಸಿರುವ ಶಿಕ್ಷಣ, ಸಂಘಟನೆ, ಹೋರಾಟಗಳನ್ನು ಮೈಗೂಡಿಸಿಕೊಂಡು ಸಮಾಜವನ್ನು ಮುಖ್ಯವಾಹಿನಿಗೆ ತರುವ ಕಾರ್ಯವನ್ನು ಎಲ್ಲರೂ ಮಾಡಬೇಕು. ಸಮಾಜ ಪ್ರಗತಿಯಾಗಬೇಕಾದರೇ ಕಡ್ಡಾಯವಾಗಿ ತಮ್ಮ ಮಕ್ಕಳಿಗೆ ಶಿಕ್ಷಣ ನೀಡಬೇಕು. ಶಿಕ್ಷಣದಿಂದ ಮಾತ್ರ ಇಡೀ ಸಮಾಜ ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ವೇದಿಕೆಯಲ್ಲಿ ಯುವ ಧುರೀಣ ಸರ್ವೋತ್ತಮ ಭೀಮಶಿ ಜಾರಕಿಹೊಳಿ, ವಿವಿಧ ದಲಿತ ಸಂಘಟನೆಗಳ ಮುಖಂಡರಾದ ಸತ್ತೆಪ್ಪ ಕರವಾಡೆ, ರಮೇಶ ಮಾದರ, ಬಸವರಾಜ ಕಾಡಾಪೂರ, ಮರೆಪ್ಪ ಮರೆಪ್ಪಗೋಳ, ರಮೇಶ ಸಣ್ಣಕ್ಕಿ, ಲಕ್ಷ್ಮಣ ತೆಳಗಡೆ, ಮನೋಹರ ಅಜ್ಜನಕಟ್ಟಿ, ಪ್ರಭಾ ಶುಗರ್ಸ ನಿರ್ದೇಶಕ ಎಮ್.ಆರ್.ಭೋವಿ, ಕೌಜಲಗಿ ಜಿ.ಪಂ ಮಾಜಿ ಸದಸ್ಯ ಪರಮೇಶ್ವರ ಹೊಸಮನಿ, ಪಿಎಲ್ಡಿ ಬ್ಯಾಂಕ್ ನಿರ್ದೇಶಕ ಅಶೋಕ ಉದ್ದಪ್ಪನವರ, ಮೂಡಲಗಿ ಪುರಸಭೆ ಉಪಾಧ್ಯಕ್ಷೆ ರೇಣುಕಾ ಹಾದಿಮನಿ, ಹಿರಿಯ ಸದಸ್ಯ ರವೀಂದ್ರ ಸಣ್ಣಕ್ಕಿ, ತಾ.ಪಂ ಮಾಜಿ ಅಧ್ಯಕ್ಷ ಶಂಕರ ಬೆಳಗಲಿ, ಪ್ರಭು ಬಂಗೆನ್ನವರ, ನಿವೃತ್ತ ಪೋಲಿಸ್ ಅಧಿಕಾರಿ ಬಾಲಚಂದ್ರ ಶಿಂಗ್ಯಾಗೋಳ, ಅಶೋಕ ಭಜಂತ್ರಿ ಸೇರಿದಂತೆ ಎಸ್.ಸಿ/ಎಸ್.ಟಿ ಸಮುದಾಯದ ಹಲವಾರು ಮುಖಂಡರು ಉಪಸ್ಥಿತರಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮುಖಂಡ ಯಮನಪ್ಪ ಕರಬನ್ನವರ ಅವರು, ಶಾಸಕ ಬಾಲಚಂದ್ರ ಜಾರಕಿಹೊಳಿ ಅವರಿಗೆ ಮತ್ತಷ್ಟು ಶಕ್ತಿಯನ್ನು ನೀಡಲು ಈ ದಲಿತ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ಶೋಷಿತರು, ಬಡವರು, ನೊಂದವರ ಕಣ್ಣಿರನ್ನು ಒರೆಸುತ್ತಿರುವ ಕ್ಷೇತ್ರದ ಅಭಿವೃದ್ದಿಗೆ ಪಣ ತೊಟ್ಟು ಜನಸೇವಕರಾಗಿ ಕೆಲಸ ಮಾಡುತ್ತಿರುವ ಬಾಲಚಂದ್ರ ಜಾರಕಿಹೊಳಿ ಅವರು ಪದೇ–ಪದೇ ರಾಜಕೀಯ ನಿವೃತ್ತಿಯ ಬಗ್ಗೆ ಮಾತನಾಡುತ್ತಿದ್ದಾರೆ. ಅದಕ್ಕೆಲ್ಲಾ ನಮ್ಮ ವಿರೋಧವಿದೆ. ಜನರ ಪ್ರೀತಿ ಆಶೀರ್ವಾದ ಇರುವ ತನಕ ಈ ಭಾಗದ ಶಾಸಕರಾಗಿರಿ, ದೇವರ ಅನುಗ್ರಹ ಸದಾ ನಿಮ್ಮೊಲಿರಲಿ, ರಾಜಕೀಯ ನಿವೃತ್ತಿಯ ಮಾತುಗಳನ್ನು ಯಾವ ಕಾಲಕ್ಕೂ ಆಡಬೇಡಿ ನಾವು ನಿಮ್ಮೊಂದಿಗೆ ಸದಾ ಇದ್ದೇವೆ ಎಂದು ಹೇಳಿದರು.

## ಬೆಳಗಾವಿಯಲ್ಲಿ ಶ್ರೀ ಯೋಗಿ ನಾರಾಯಣ ಯತೀಂದ್ರರ (ಕೈವಾರ ತಾತಯ್ಯ) ಜಯಂತಿ

# ಶಿಕ್ಷಣದಿಂದ ಉತ್ತಮ ಭವಿಷ್ಯ: ಶಾಸಕ ಅನಿಲ ಬೆನಕೆ



ಬೆಳಗಾವಿ: "ಸಮಾಜದಲ್ಲಿ ಮೀಸಲಾತಿ ಎಲ್ಲ ಸಮುದಾಯಾಗಳಿಗೆ ಸಿಗಬೇಕು, ಬಡವರ ಅಭಿವೃದ್ಧಿ ಆಗಬೇಕಾದರೆ ಸಮಾಜದಲ್ಲಿನ ಎಲ್ಲ ಸಮುದಾಯದ ಜನರಿಗೆ ಶಿಕ್ಷಣ ಸಿಗಬೇಕು. ಶಿಕ್ಷಣದಿಂದ ಮಾತ್ರ ಉನ್ನತ ಸ್ಥಾನ ಗಳನ್ನ ಪಡೆಯಲು ಸಾಧ್ಯ" ಎಂದು ಬೆಳಗಾವಿ ಉತ್ತರ ಮತಕ್ಷೇತ್ರದ ಶಾಸಕರಾದ ಅನಿಲ ಬೆನಕೆ ಅವರು ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನರ ಪಾಲಿಕೆಯ ವತಿಯಿಂದ ನಗರದ ಕುಮಾರ ಗಂಧರ್ವ ಕಲಾಮಂದಿರದಲ್ಲಿ ಭಾನುವಾರ (ಮಾ.19) ರಂದು ಏರ್ಪಡಿಸಲಾಗಿದ್ದ ಶ್ರೀ ಯೋಗಿ ನಾರಾಯಣ ಯತೀಂದ್ರರ (ಕೈವಾರ ತಾತಯ್ಯ ) ಅವರ ಜಯಂತಿ ಕಾರ್ಯಕ್ರಮನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉತ್ತಮ ಶಿಕ್ಷಣ ಪಡೆದರೆ ನೀವು ಮಾಡುವ ಯಾವುದೇ ವೃತ್ತಿಯಲ್ಲಿಯೂ ಕೂಡ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಸರಕಾರದಿಂದ ಎಲ್ಲ ಸಮುದಾಯಗಳಿಗೆ ವಿವಿಧ ಯೋಜನೆಯಡಿಯಲ್ಲಿ ಅನುದಾನಗಳು ಇರುತ್ತವೆ. ಅವು ಗಳನ್ನು ತಿಳಿದುಕೊಂಡು ಅವುಗಳ ಸದಪಯೋಗ ಪಡೆದುಕೊಂಡು ನೀವು ಉತ್ತಮ ಜೀವನ ಕಟ್ಟಿಕೊಳ್ಳಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಅಪರ ಜಿಲ್ಲಾಧಿಕಾರಿತಾದ ಕೆ ಟಿ. ಶಾಂತಲಾ ಅವರು, ಶ್ರೀ ಯೋಗಿ ನಾರಾಯಣ ಅವರು ಜನರಿಗೆ ಅವರದೇ ಆದ ಶೈಲಿಯಲ್ಲಿ ಜಾಗೃತಿ ಮೂಡಿಸುವುದರ ಮೂಲಕ ಸಮಾಜದ ಅಭಿವೃದ್ಧಿಗೆ ಶ್ರಮಿಸಿದರು.

ಅವರು ಕೇವಲ ಒಂದೇ ಸಮುದಾಯಕ್ಕೆ ಸೀಮಿತವಾಗಿರದೆ ಸಮಾಜದ ಸಮಗ್ರ ಅಭಿವೃದ್ಧಿ ಬಯಸಿದವರು ಎಂದು ಹೇಳಿದರು ಶ್ರೀ ಯೋಗಿ ನಾರಾಯಣ ಅವರು ವಚನಗಳ ಮೂಲಕ ಸರಳ ರೀತಿಯಲ್ಲಿ ಅವರ ವಿಚಾರ ಮತ್ತು ತತ್ವಾದರ್ಶಗಳನ್ನು ಎಲ್ಲರಿಗೂ ಮನ ಮುಟ್ಟುವಂತೆ ತಿಳಿಸಿದವರು. ಹಾಗೇ ನಾವು ಕೂಡಾ ಅವರ ಇತಿಹಾಸ ಅವರ ವಚನ ಸಂದೇಶ, ಬೋಧನೆ ಹಾಗೂ ಅವರ ತತ್ವಾದರ್ಶಗಳನ್ನು ತಿಳಿದುಕೊಂಡು ನಮ್ಮ ಜೀವನದಲ್ಲಿ ಅಳಡಿಸಿಕೊಳ್ಳೋಣ ಎಂದು ಕೆ ಟಿ. ಶಾಂತಲಾ ಅವರು ಹೇಳಿದರು.

ಶ್ರೀ ಯೋಗಿ ನಾರಾಯಣ ಅವರು ದಾರ್ಶನಿಕರ ಸಾಲಿಗೆ ಸೇರಿದವರು ಹೀಗಾಗಿ ಅವರ ಎಲ್ಲ ಬೋಧನೆಗಳು ಉಪನಿಷತ್, ರಾಮಾಯಣ ಮತ್ತು ಮಹಾಭಾರತಗಳನ್ನು ಆಧರಿಸಿವೆ ಎಂದು ವಿಶೇಷ ಉಪನ್ಯಾಸಕರಾದ ಪೂಜಾ ಮಾ. ತೇಲಂಗಾ ಅವರು ಅಭಿಪ್ರಾಯಪಟ್ಟರು.

ಅವರು ಭಕ್ತಿ ಭಾವದ ಮೂಲಕ ಧ್ಯಾನ ಮಾರ್ಗದ ಮೂಲಕ ಜನಮಾನಸದಲ್ಲಿ ಭಕ್ತಿಭಾವ ಬಿತ್ತುವಂತೆ ಭಕ್ತಿಗೀತೆಗಳನ್ನು ರಚಿಸಿದರು. ಹೀಗೇ ಅವರದೇ ಆದ ಶೈಲಿಯಲ್ಲಿ ಸಮಾಜಕ್ಕೆ ಸಂದೇಶ ಬೋಧನೆಗಳನ್ನು ನೀಡಿದ್ದಾರೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಬಲಿಜ ಸಮುದಾಯದ ಉಪಾಧ್ಯಕ್ಷರಾದ ಸತೀಶ ಗುಡಮೆಟ್, ಸಮುದಾಯ ಜನರು ಬಹಳಷ್ಟು ಕ್ಷೇತ್ರಗಳಲ್ಲಿ ಹಿಂದೆ ಉಳಿದಿದ್ದಾರೆ ಆದ್ದರಿಂದ ಬಲಿಜ ಸಮುದಾಯ ಜನರೂ ಎಲ್ಲ ಕ್ಷೇತ್ರಗಳಲ್ಲಿಯೂ ಉನ್ನತ ಸಾಧನೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ಸರಕಾರ ಸಮುದಾಯಕ್ಕೆ ಮೀಸಲಾತಿ ಕೊಡಬೇಕು ಎಂದು ಮನವಿ ಮಾಡಿಕೊಂಡರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಮಾಜಿ ನಗರ ಸೇವಕರಾದ ಜಯಶೀ ಮಾಳಗಿ, ಮಾರುತಿ ಗೋ. ತೇಲಂಗ( ನಾಯ್ಡು ) ಹಾಗೂ ಸಮುದಾಯದ ಪ್ರಮುಖರು ಉಪಸ್ಥಿತರಿದ್ದರು.

# ಮಹಿಳೆಯ ಕತ್ತರಿಸಿದ ದೇಹದ ಭಾಗಗಳು ಪತ್ತೆ



ನವದೆಹಲಿ: ದೆಹಲಿ ಪೊಲೀಸರು ಮಹಿಳೆಯ ತಲೆಬುರುಡೆ ಸೇರಿದಂತೆ ವಿರೂಪಗೊಂಡ ದೇಹದ ಭಾಗಗಳನ್ನು ವಶಪಡಿಸಿಕೊಂಡಿದ್ದಾರೆ. ಪ್ಲಾಸ್ಟಿಕ್ ಚೀಲದಲ್ಲಿ ಸುತ್ತಿ ರಾಷ್ಟ್ರ ರಾಜಧಾನಿಯ ಮೆಟ್ರೋ ನಿರ್ಮಾಣ ಸ್ಥಳದ ಬಳಿ ಎಸೆಯಲಾಗಿದೆ ಎಂದು ಅಧಿಕಾರಿಯೊಬ್ಬರು ಭಾನುವಾರ ತಿಳಿಸಿದ್ದಾರೆ.

ಅಧಿಕಾರಿಯ ಪ್ರಕಾರ, ಶನಿವಾರ ಮಧ್ಯಾಹ್ನ 12 ಗಂಟೆಯ ಸುಮಾರಿಗೆ ರಾಪಿಡ್ ಮೆಟ್ರೋದ ನಿರ್ಮಾಣ ಹಂತದ ಪ್ರದೇಶದಲ್ಲಿ ಸರೈ ಕಾಲೇ ಖಾನ್ ಐಎಸ್‌ಬಿಟಿ ಬಳಿ ಪತ್ತೆಯಾದ ಮಾನವ ದೇಹದ ಭಾಗಗಳ ಬಗ್ಗೆ ಸನ್‌ಲೈಟ್ ಕಾಲೋನಿ ಪೊಲೀಸ್ ಠಾಣೆಗೆ ಮಾಹಿತಿ ಲಭ್ಯವಾಗಿದೆ.

ಸ್ಥಳಕ್ಕಾಗಮಿಸಿದಾಗ, ಕೊಳೆತ ಮಾನವ ದೇಹದ ಕೆಲವು ಭಾಗಗಳು ಮತ್ತು ಒಂದು ಗೊಂಚಲು ಕೂದಲು ಪ್ಲಾಸ್ಟಿಕ್ ಚೀಲದಲ್ಲಿ ಪತ್ತೆಯಾಗಿದೆ ಎಂದು ದೆಹಲಿ ಪೊಲೀಸ್ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ದೆಹಲಿ ಪೊಲೀಸ್ ಮತ್ತು ವಿಧಿ ವಿಜ್ಞಾನ ಪ್ರಯೋಗಾಲಯದ (ಎಫ್‌ಎಸ್‌ಎಲ್) ಅಪರಾಧ ತಂಡವು ಸ್ಥಳವನ್ನು ಪರಿಶೀಲಿಸಿದೆ. ಪತ್ತೆಯಾದ ಭಾಗಗಳನ್ನು ಮುಂದಿನ ಕ್ರಮಕ್ಕಾಗಿ ಏಮ್ಸ್ ಆಸ್ಪತ್ರೆಗೆ ವರ್ಗಾಯಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಪೊಲೀಸರು ಭಾರತೀಯ ದಂಡ ಸಂಹಿತೆಯ ಸೆಕ್ಷನ್ 302 (ಕೊಲೆ) ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ ಮತ್ತು ಈ ವಿಷಯದ ಬಗ್ಗೆ ತನಿಖೆ ಆರಂಭಿಸಿದ್ದಾರೆ. ಪತ್ತೆಯಾದ ಛಿದ್ರಗೊಂಡ ಮೃತದೇಹದ ಗುರುತು ಪತ್ತೆ ಹಚ್ಚಲು ಶೋಧ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಗಮನಾರ್ಹವಾಗಿ, ದೆಹಲಿಯು ಕಳೆದ ವರ್ಷ ಇದೇ ರೀತಿಯ ಎರಡು ಘಟನೆಗಳಿಗೆ ಸಾಕ್ಷಿಯಾಗಿದೆ. ಒಂದು ಅಫ್ತಾಬ್ ಅಮೀನ್ ಪೂನಾವಾಲಾ ಶ್ರದ್ಧಾ ಲೈವ್-ಇನ್ ಪಾರ್ಟ್ನರ್ ಆಗಿದ್ದ ಶ್ರದ್ಧಾ ವಾಕರ್ ಹತ್ಯೆ ಮಾಡಿ, ಆಕೆಯ ದೇಹವನ್ನು ಹಲವಾರು ತುಂಡುಗಳಾಗಿ ಕತ್ತರಿಸಿ ನಂತರ ನಗರದ ವಿವಿಧ ಸ್ಥಳಗಳಲ್ಲಿ ಎಸೆದಿದ್ದನು.

ಎರಡನೇ ಪ್ರಕರಣವು ಪೂರ್ವ ದೆಹಲಿಯ ಪಾಂಡವ್ ನಗರ ಪ್ರದೇಶದಿಂದ ವರದಿಯಾಗಿದ್ದು, ಲ್ಲಿ 48 ವರ್ಷದ ವ್ಯಕ್ತಿಯನ್ನು ಆತನ ಹೆಂಡತಿ ಮತ್ತು ಮಲಮಗನು ಕೊಲೆ ಮಾಡಿದ್ದಾರೆ. ಬಳಿಕ ದೇಹವನ್ನು ಹನ್ನೆರಡು ತುಂಡುಗಳಾಗಿ ಕತ್ತರಿಸಿ ನಂತರ ಕ್ರಮೇಣ ನಗರದ ನಿರ್ಜನ ಸ್ಥಳದಲ್ಲಿ ವಿಲೇವಾರಿ ಮಾಡಿದ್ದರು.

## ವಿದ್ಯುತ್ ತಗುಲಿ ಒಂದೇ ಕುಟುಂಬದ ತಾಯಿ, ಇಬ್ಬರು ಮಕ್ಕಳು ಸಾವು



ಚಿಂಚೋಳಿ: ವಿದ್ಯುತ್ ಸ್ಪರ್ಶಿಸಿ ಒಂದೇ ಕುಟುಂಬದ ಮೂವರು ಸ್ಥಳದಲ್ಲೇ ಮೃತಪಟ್ಟ ದಾರುಣ ಘಟನೆ ಧನಗರಗಲ್ಲಿಯಲ್ಲಿ ತಡರಾತ್ರಿ ಸಂಭವಿಸಿದೆ.

ಮೃತರು 44 ವರ್ಷದ ತಾಯಿ ಝುರಣಮ್ಮ ಅಂಬಣ್ಣ ಬಸಗೊಂಡ ಮತ್ತು ಇಬ್ಬರು ಮಕ್ಕಳಾದ 20 ವರ್ಷದ ಮಹೇಶ ಅಂಬಣ್ಣ ಬಸಗೊಂಡ 18 ವರ್ಷದ ಸುರೇಶ ಅಂಬಣ್ಣ ಬಸಗೊಂಡ ಮೃತ ದುರ್ದೈವಿಗಳು. ಘಟನೆಯಲ್ಲಿ ಮೃತ ಝುರಣಮ್ಮ ಪತಿ ಅಂಬಣ್ಣಗೆ ಗಾಯಗಳಾಗಿದ್ದು ಆಸ್ಪತ್ರೆಗೆ ಸೇರಿಸಲಾಗಿದೆ. ಚಿಂಚೋಳಿಯಲ್ಲಿ ನಿನ್ನೆ ರಾತ್ರಿ ಧಾರಾಕಾರ ಮಳೆ ಸುರಿದಿದ್ದು ಗಾಳಿಗೆ ಮನೆಯ ಮುಂದೆ ವಿದ್ಯುತ್ ತಂತಿ ತುಂಡಾಗಿ ನೀರಿನಲ್ಲಿ ಬಿದ್ದಿತ್ತು. ದನದ ಮೇವು ಮಳೆಗೆ ನೆನೆಯದಿರಲೆಂದು ಅದನ್ನು ಮುಚ್ಚಲು ಕಳೆದ ತಡರಾತ್ರಿ ಹೊರಬಂದಿದ್ದಾಗ ಕರೆಂಟ್ ಶಾಕ್ ಹೊಡೆದಿದೆ. ಹೊರಗೆ ಹೋದವರು ಇನ್ನು ಬರಲಿಲ್ಲ ಎಂದು ನೋಡಲು ಬಂದಿದ್ದಾಗ ಒಬ್ಬಬ್ಬರೇ ಕರೆಂಟ್ ಶಾಕ್ ಗೆ ಬಲಿಯಾಗಿದ್ದಾರೆ.

# ಸಮಾಜದಲ್ಲಿ ಮಹಿಳೆ ಅಬಲೆಯಲ್ಲ ಸಬಲೆ: ಸತೀಶ ಜಾರಕಿಹೊಳಿ



ಬೆಳಗಾವಿ: ವಿವಿಧ ಕ್ಷೇತ್ರಗಳಲ್ಲಿ ಅನನ್ಯ ಸಾಧನೆ ಮಾಡುತ್ತಿರುವ ಮಹಿಳೆ ಸಬಲೆಯೇ ಹೊರತು ಅಬಲೆಯಲ್ಲ. ಮಹಿಳೆಯರು ಯಾವುದೇ ಕಾರಣಕ್ಕೂ ಅಸ್ತಿತ್ವ ಕಳೆದುಕೊಳ್ಳದೆ ಸ್ವಾಭಿಮಾನದಿಂದ ಬದುಕಬೇಕು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಹೇಳಿದರು.

ತಾಲೂಕಿನ ಕಾಕತಿ ಗ್ರಾಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಮಹಿಳಾ ಸ್ವ-ಸಹಾಯ ಸಂಘ ವತಿಯಿಂದ ಹಮ್ಮಿಕೊಂಡ ವಿಶ್ವ ಮಹಿಳಾ ದಿನಾಚರಣ ' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿ, ಗ್ರಾಮೀಣ ಮಹಿಳೆಯರು ಸರ್ಕಾರದ ಸವಲತ್ತು ಸದ್ಬಳಕೆ ಮಾಡಿಕೊಂಡು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಸಲಹೆ ನೀಡಿದರು.

ಸರ್ಕಾರ ಗ್ರಾಮೀಣ ಮಹಿಳೆಯರಿಗೆ ಮತ್ತಷ್ಟು?ಕಾರ್ಯಕ್ರಮಗಳನ್ನು ರೂಪಿಸಬೇಕು. ಮಹಿಳೆಯು ನಾಲ್ಕು ಗೋಡೆಗಳ ಮಧ್ಯೆ ಕುಟುಂಬ ನಿರ್ವಹಣೆಗಷ್ಟೇ ಸೀಮಿತವೆಂಬ ಕಾಲ ಬದಲಾಗಿದೆ.

ಮಹಿಳೆಯರು ಈಗ ಪುರುಷರಿಗೆ ಸರಿ ಸಮಾನ. ಮಹಿಳೆಯರು ಸ್ವಯಂ ಉದ್ಯೋಗದ ಮೂಲಕ ಬದುಕು ಕಟ್ಟಿ-ಕೊಂಡು ಆರ್ಥಿಕವಾಗಿ ಸಬಲರಾಗಬೇಕು. ಉನ್ನತ ಸ್ಥಾನ ಅಲಂಕರಿಸಿ ಪುರುಷರಿಗೆ ಸಮನಾಗಿ ಬೆಳೆಯಬೇಕು ಎಂದು ತಿಳಿ ಹೇಳಿದರು.

ಮಹಿಳಾ ಸಬಲೀಕರಣ ಎಂದ-ರೆ ಮಹಿಳೆಯರ ಸುರಕ್ಷತೆಗೆ?ಒತ್ತು ನೀಡುವುದಾಗಿದೆ. ಮಹಿಳೆಯರ ಮೇಲೆ ಸಮಾಜದಲ್ಲಿ ನಡೆಯುವ ದೌರ್ಜನ್ಯದ ಬಗ್ಗೆ ಅರಿವು ಮೂಡಿಸಿ ಧೈರ್ಯ ತುಂಬಿ ಸ್ವಾವಲಂಬಿಗಳಾಗಿಸಬೇಕು. ವೇದಗಳ ಕಾಲದಲ್ಲೂ ಮಹಿಳೆಯರಿಗೆ ಸಮಾನ ಅವಕಾಶಗಳಿದ್ದವು. ಮಹಿಳೆಯರನ್ನು ಕುಟುಂಬಕ್ಕೆ ಸೀಮಿತಗೊಳಿಸದೆ?ಎಲ್ಲಾ ಕ್ಷೇತ್ರದಲ್ಲೂ ಭಾಗವಹಿಸುವಂತೆ ಅವಕಾಶ ಕಲ್ಪಿಸಬೇಕು ಎಂದರು.

ಸಮಾನ ಅವಕಾಶ: ಸಮಾಜ ಸುಧಾರಕರು, ಮಹನೀಯರ ಹೋರಾಟ, ತ್ಯಾಗ ಬಲಿದಾನದಿಂದ ಮಹಿಳೆಯರಿಗೆ ಇಂದು ಸಮಾಜದಲ್ಲಿ ಪುರುಷರಷ್ಟೇ ಸಮಾನ ಅವಕಾಶ ದೊರೆತಿವೆ. ಮಹಿಳೆಯರು ಎಲ್ಲಾ ಅಡೆತಡೆ?ಮೀರಿ ಎಲ್ಲಾ ರಂಗದಲ್ಲೂ?ಸ್ಪರ್ಧೆ ನೀಡುತ್ತಿದ್ದಾರೆ. ಮಹಿಳೆಯರಿಗೆ ರಾಜಕೀಯವಾಗಿ ಮತ್ತು ಸಾಮಾಜಿಕವಾಗಿ ಹೆಚ್ಚಿನ ಪ್ರಾತಿನಿಧ್ಯ ಸಿಗಬೇಕು ಎಂದು ಹೇಳಿದರು.

ಇದೇ ವೇಳೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರನ್ನು ವೇದಿಕೆ ಮೇಲಿದ್ದ ಗಣ್ಯರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ, ಜಿಪಂ ಮಾಜಿ ಸದಸ್ಯ ಸಿದ್ದು ಸುಣಗಾರ ಸೇರಿದಂತೆ ಕಾಕತಿ ಗ್ರಾಮದ ಮುಖಂಡರು ಹಾಗೂ ಅಪಾರ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸಿದ್ದರು.

# ಸ್ತ್ರೀಯರಿಗೆ ಸಮಾಜದ ಎಲ್ಲ ಕ್ಷೇತ್ರಗಳಲ್ಲಿ ಸಮನಾದ ಗೌರವ ಸಿಗುವಂತಾಗಬೇಕು




ಬೆಳಗಾವಿ: "ಮನೆ ಮನೆಯಲ್ಲಿ ಮಹಿಳೆಯು ತಾಯಿ, ಅತ್ತೆ, ಹೆಂಡತಿ, ಮಗಳು, ಸೊಸೆ, ಅಕ್ಕ, ತಂಗಿ ಹೀಗೆ ವಿವಿಧ ಸ್ಥಾನದಲ್ಲಿ ನಿಂತು ಕುಟುಂಬದ ಮೂಲ ಆಧಾರವಾಗಿರುತ್ತಾಳೆ. ಅಂಥ ಸ್ತ್ರೀಯರಿಗೆ ಸಮಾಜದ ಎಲ್ಲ ಕ್ಷೇತ್ರಗಳಲ್ಲಿ ಸಮನಾದ ಗೌರವ ಸಿಗುವಂತಾಗಬೇಕು" ಎಂದು ಬೆಳಗಾವಿಯ ಸಂಸದರಾದ ಶ್ರೀಮತಿ ಮಂಗಲಾ ಅಂಗಡಿ ಕರೆ ನೀಡಿದರು.

ನಗರದ ಕಪಿಲೇಶ್ವರ ರಸ್ತೆಯ ಶಿವಂ ಸಭಾ ಭವನದಲ್ಲಿ ಜರುಗಿದ ಅಂತರ್ರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, " ಸಮಾಜದಲ್ಲಿ ಮಹಿಳೆಯರಿಗೆ ಆಗುವ ಅನ್ಯಾಯ, ದೌರ್ಜನ್ಯಗಳನ್ನು ಖಂಡಿಸಬೇಕು. ಮನೆಯಿಂದ ಹಿಡಿದು ಸಮಾಜದ ವಿವಿಧ ಸ್ಥಳಗಳಲ್ಲಿ ಮಹಿಳೆಗೆ ಅನ್ಯಾಯವಾದಾಗ ಅಲ್ಲಿರುವ ಎಲ್ಲ ಸ್ತ್ರೀಯರು ಸ್ಪಂದಿಸಬೇಕು. ಅಂದಾಗ ಮಾತ್ರ ಮಹಿಳೆಯರ ರಕ್ಷಣೆ-ಯಾಗುತ್ತದೆ. ಮಹಿಳಾ ಕಾರ್ಮಿಕರಿಗಾಗುತ್ತಿದ್ದ ವೇತನ ತಾರತಮ್ಯ ಖಂಡಿಸಿ ಉಂಟಾದ ಪ್ರತಿಭಟನೆಯ ಪ್ರತಿಫಲವಾಗಿ ಇಂದು ವಿಶ್ವದೆಲ್ಲೆಡೆ ಮಹಿಳಾ ದಿನಾಚರಣೆ ಆಚರಿಸಲಾಗುತ್ತಿದೆ. ತತ್ಪರಿಣಾಮವಾಗಿ ನಮ್ಮ ದೇಶದಲ್ಲಿ ಎಲ್ಲ ಕ್ಷೇತ್ರಗಳಲ್ಲಿ ಮಹಿಳೆಯರು ಸಂವಿಧಾನಾತ್ಮಕ ಸವಲತ್ತುಗಳನ್ನು ಪಡೆಯುವಂತಾಗಿದೆ. ಆ ನಿಟ್ಟಿನಲ್ಲಿ ಮಹಿಳೆಯರು, ಮಕ್ಕಳು ಹಾಗೂ ಸಮಾಜದಿಂದ ದೂಷಿಸಲ್ಪಟ್ಟ ಜನರಿಗೆ ಆತ್ಮಸ್ಥೈರ್ಯ ತುಂಬುವ ಮೂಲಕ ಸಹಕಾರ ನೀಡುತ್ತಿರುವ ಶ್ರೀ ಸಾಯಿಶ್ರದ್ಧಾ ಮಹಿಳಾ ಕಲ್ಯಾಣ ಸಂಸ್ಥೆ ತೆಗೆದುಕೊಳ್ಳುತ್ತಿರುವ ಆಸಕ್ತಿ ಮತ್ತು ಕಾಳಜಿಯನ್ನು ಶ್ಲಾಘನೀಯ" ಎಂದು ಹೇಳಿದರು.


ಕಾರ್ಯಕ್ರಮದಲ್ಲಿ ಮುಖ್ಯ ಅತಿ-ಥಿಯಾಗಿ ಆಗಮಿಸಿದ ಬೆಳಗಾವಿ ನಗರದ ತಿಳಕವಾಡಿ ಪೊಲೀಸ್ ಠಾಣೆಯ ಪಿ.ಎಸ್.ಐ. ಶ್ರೀಮತಿ ಶ್ವೇತಾ ರೇವಣಯ್ಯಸ್ವಾಮಿ ಅವರು ಮಾತನಾಡಿ, " ಮಹಿಳಾ ಸಮಾನತೆಯ ಚಳುವಳಿಗಳು ಪಾಶ್ಚಿಮಾತ್ಯ ದೇಶಗಳಲ್ಲಿ ಆರಂಭವಾದರೂ ಭಾರತದ ಸ್ವತಂತ್ರಾ ನಂತರ ಸಂವಿಧಾನಾತ್ಮಕ ರಕ್ಷಣೆ ದೊರೆತ ಮೇಲೆ ಎಲ್ಲ ಕ್ಷೇತ್ರಗಳಲ್ಲಿ ಮಹಿಳೆಯರು ಪ್ರಗತಿ ಸಾಧಿಸುವಂತಾಗಿದೆ. ಗ್ರಾಮೀಣ ಭಾಗದ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಮುಖ್ಯವಾಹಿನಿಗೆ ಬರುವಂತಾಗಲು ಹೆಚ್ಚು ಶಿಕ್ಷಣ ಪಡೆಯುವಂತಾಗಬೇಕು" ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಸ್ಥೆಯ ಸಂಸ್ಥಾಪಕಿ ಶ್ರೀಮತಿ ಸವಿತಾ ಹೆಬ್ಬಾರ ಮಾತನಾಡಿ, " ನಮ್ಮ ದೇಶದಲ್ಲಿ ಹೆಚ್ಚಿನ ಮಹಿಳೆಯರು ಗ್ರಾಮೀಣ ಭಾಗದಲ್ಲಿ ಕೃಷಿ ಕಾರ್ಯಗಳಲ್ಲಿ ತೊಡಗಿಕೊಂಡಿ-ದ್ದಾರೆ. ಅಂಥ ಮಹಿಳೆಯರಲ್ಲಿ ಜಾಗೃತಿ ಮಾಡುವ ಉದ್ದೇಶ ಸಂಸ್ಥೆಯದ್ದಾಗಿದ್ದು ವಿವಿಧ ಕ್ಷೇತ್ರದ ದುರ್ಬಲ ಜನರಿಗೆ ಸಹಾಯ ಹಸ್ತ ನೀಡುವುದರೊಂದಿಗೆ ಮಹಿಳೆಯರಿಗೆ ಸ್ವ ಉದ್ಯೋಗ ತರಬೇತಿ ನೀಡುವ ಮೂಲಕ ಮಹಿಳಾ ಸ್ವಾವಲಂಬಿ ಬದುಕಿಗೆ ಬೆಂಬಲವಾಗಿ ನಿಂತಿದೆ" ಎಂದರು.

ಪ್ಯಾಟ್ಸನ್ ಸೌಹಾರ್ದ ಸಂಸ್ಥೆಯ ಅಧ್ಯಕ್ಷ ಶ್ರೀಮತಿ ಆಶಾ ಪಾಟೀಲ ಅತಿಥಿಯಾಗಿ ಆಗಮಿಸಿ ಮಾತನಾಡಿದರು. ಬೆಳಗಾವಿಯ ಕೃಷ್ಣಾ ಫೌಂಡೇಶನ್ ಹಾಗೂ ಶ್ರೀ ರವಿಶಂಕರ ವಿದ್ಯಾವರ್ಧಕ ಸಂಸ್ಥೆಯ ಕಾರ್ಯದರ್ಶಿ ಶ್ರೀಮತಿ ರೇಣುಕಾ ಮಜಲಟ್ಟಿ, ಆಶ್ರಯ ಫೌಂಡೇಶನ ಸಂಸ್ಥಾಪಕಿ ನಾಗರತ್ನ ರಾಮಗೊಂಡ, ಅನಿತಾ ಗಾವಡೆ ಸೇರಿ ಮಹಿಳಾ ಸಬಲೀಕರಣದಲ್ಲಿ ಸೇವೆಗೈದ ವಿವಿಧ ಕ್ಷೇತ್ರದ ಸಾಧಕರನ್ನು ಸಂಸ್ಥೆಯ ವತಿಯಿಂದ ಸತ್ಕರಿಸಿ ಗೌರವಿಸಲಾಯಿತು.

ಸಮನ್ವಯ ಸಂಸ್ಥೆಯ ಅಂಧಮಕ್ಕಳ ಪ್ರಾರ್ಥನೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಪ್ರಮೋದ ಕೋಲ್ಕಾರ ಸ್ವಾಗತಿಸಿದರು. ಶಿಲ್ಪಾ ದೊಡ್ಡಮನಿ ಕಾರ್ಯಕ್ರಮ ನಿರ್ವಹಿಸಿದರು. ರಕ್ಷಿತಾ ರಾಯಣ್ಣವರ ವಂದಿಸಿದರು.

## ಮಾನಸಿಕ ಖಿನ್ನತೆ: 13ರ ಬಾಲಕಿ ಆತ್ಮಹತ್ಯೆಗೆ ಶರಣು



ಮಡಿಕೇರಿ: ಖಿನ್ನತೆಯಿಂದ ಬಳಲುತ್ತಿದ್ದ 7ನೇ ತರಗತಿಯ ವಿದ್ಯಾರ್ಥಿನಿ ತಮ್ಮ ಮನೆಯಲ್ಲೇ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಶಿವರಹಳ್ಳಿ ಗ್ರಾಮದಲ್ಲಿ ನಡೆದಿದೆ.

ಶಿವರಹಳ್ಳಿ ಗ್ರಾಮದ ಜಿತೇಂದ್ರ-ಅಕ್ಷತಾ ದಂಪತಿಯ ಪುತ್ರಿ ವೈಷ್ಣವಿ (13) ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿನಿ. ಸೊಮವಾರಪೇಟೆಯ ಖಾಸಗಿ ಶಾಲೆಯಲ್ಲಿ 7ನೇ ತರಗತಿ ಓದುತ್ತಿದ್ದ ವೈಷ್ಣವಿ ಕಳೆದ ಒಂದು ವಾರದಿಂದಲೂ ಖಿನ್ನತೆಯಿಂದ ಬಳಲುತ್ತಿದ್ದಳು. ಭಾನುವಾರ ಮನೆಯಲ್ಲಿ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎನ್ನಲಾಗಿದೆ. ಶನಿವಾರಸಂತೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಶನಿವಾರಸಂತೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ರವಾನಿಸಲಾಗಿದೆ.

## ಡಾ. ಬಿ.ಆರ್ ಅಂಬೇಡ್ಕರ್ ಜಯಂತಿ: ಮಾ.21 ರಂದು ಪೂರ್ವ ಸಿದ್ಧತಾ ಸಭೆ

ಬೆಳಗಾವಿ: ಸಂವಿಧಾನ ಶಿಲ್ಪಿ, ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 132 ನೇ ಜಯಂತಿ ಏಪ್ರಿಲ್ 14 ರಂದು ಮತ್ತು ಮಾರ್ಚ್ 5 ರಂದು ಹಸಿರು ಕ್ರಾಂತಿ ಹರಿಕಾರ ಮಾಜಿ ಪ್ರಧಾನಿ ಡಾ. ಬಾಬು ಜಗಜೀವನರಾಮರವರ 116ನೇ ಜಯಂತಿಗಳನ್ನು ಆಚರಿಸುವ ಸಲುವಾಗಿ ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ (ಮಾ.21) ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ.

ಸದರಿ ಸಭೆಗೆ ಸಮುದಾಯದ ಎಲ್ಲಾ ಮುಖಂಡರುಗಳು ಮತ್ತು ಸಂಘ ಸಂಸ್ಥೆಗಳ ಮುಖಂಡರುಗಳು ಹಾಜರಾಗಿ ತಮ್ಮ ಸಲಹೆ, ಸೂಚನೆಗಳನ್ನು ನೀಡಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಮಹಿಳಾ ಐಟಿಐ: ಅಲ್ಪಾವಧಿ ಕೋರ್ಸುಗಳ ಉಚಿತ ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಮಹಿಳಾ) ಉದ್ಯಮಬಾಗ ಇಲ್ಲಿ ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆಯಡಿ (PMKVY4.0) ಅಲ್ಪಾವಧಿ ಕೋರ್ಸುಗಳ ಉಚಿತ ತರಬೇತಿಯ ಪ್ರವೇಶಕ್ಕಾಗಿ Data Entry Operator, CNC Operator – Vertical Machining Centre, Assistant Electrician, Electric Vehicle Service Technician ಈ ಕೋರ್ಸುಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದಿಂದ ಸರ್ಟಿಫಿಕೇಟ್‌ಗಳನ್ನು ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಮಾರ್ಚ.25 2023 ರ ಒಳಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ಉದ್ಯಮಬಾಗ ಕಛೇರಿಗೆ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 9632130029, 9663040353, 9047296100 ಗೆ ಸಂಪರ್ಕಿಸಬಹುದು ಎಂದು ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಭಿವೃದ್ಧಿ ಕಾಮಗಾರಿ ಲೋಕಾರ್ಪಣೆ



ಬೆಳಗಾವಿ : ಬೆಳಗಾವಿ ಉತ್ತರ ಮತಕ್ಷೇತ್ರದ ಶಾಸಕ ಅನಿಲ ಬೆನಕೆ ರವರು ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿದಿಯಡಿಯಲ್ಲಿ ಮಹಾಂತೇಶ ನಗರದ ಡಾ. ಫ. ಗು. ಹಳಕಟ್ಟಿ ಭವನದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳನ್ನು ಇಂದು ಕಾರಂಜಿ ಮಠದ ಶ್ರೀ. ಶ್ರೀ. ಗುರುಸಿದ್ದ ಸ್ವಾಮಿಜಿಗಳ ದಿವ್ಯ ಸಾನಿದ್ಯದಲ್ಲಿ ಹಾಗೂ ಲಿಂಗಾಯತ ಸಂಘಟನೆಯ ಮುಖಂಡರುಗಳೊಂದಿಗೆ ಮತ್ತು ನಗರ ಸೇವಕರುಗಳೊಂದಿಗೆ ಲೋಕಾರ್ಪಣೆಗೊಳಿಸಿದರು.

ಬೆಳಗಾವಿ ಉತ್ತರ ಶಾಸಕ ಅನಿಲ ಬೆನಕೆ ರವರು ಸಮಾಜದ ಮುಖಂಡರುಗಳ ಹಲವಾರು ವರ್ಷಗಳ ಬೇಡಿಕೆಯನ್ವಯ ಮಹಾಂತೇಶ ನಗರದ ಡಾ. ಫ. ಗು. ಹಳಕಟ್ಟಿ ಭವನದಲ್ಲಿ ಅಗತ್ಯ ಸೌಲಭ್ಯಗಳಾದ ಪ್ರಾರ್ಥನಾ ಮಂದಿರದ ಆವರಣ ಗೋಡೆ, ಶೌಚಾಲಯ, ಆವರಣದಲ್ಲಿ ಪೇವರ್ಸ ಅಳವಡಿಕೆ, ಲಿಂಗಾಯತ ಸಂಘಟನೆಯ ಕಚೇರಿ, ಅಡುಗೆ ಕೋಣೆ, ಭದ್ರತಾ ಸಿಬ್ಬಂದಿ ಕೋಣೆ, ಅಲಂಕಾರಿಕ ವಿದ್ಯುತ ದೀಪ ಹಾಗೂ ಇತರ ಕಾಮಗಾರಿಗಳನ್ನು ತಮ್ಮ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿಯಲ್ಲಿ ಕೈಗೊಂಡು ಅವುಗಳನ್ನು ಲೋಕಾರ್ಪಣೆಗೊಳಿಸಿದರು. ಶಾಸಕರ ಅಭಿವೃದ್ದಿಗೆ ಎಲ್ಲ ಲಿಂಗಾಯತ ಸಂಘಟನೆಯ ಮುಖಂಡರುಗಳು ಹಾಗು ಪದಾಧಿಕಾರಿಗಳು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.ಈ ಸಂದರ್ಭದಲ್ಲಿ ಶಾಸಕರೊಂದಿಗೆ ಕಾರಂಜಿ ಮಠದ ಶ್ರೀ. ಶ್ರೀ. ಗುರುಸಿದ್ದ ಸ್ವಾಮಿಜಿಗಳು, ಹಿರೇಮಠದ ಸ್ವಾಮಿಜಿಗಳು, ಲಿಂಗಾಯತ ಸಂಘಟನೆಯ ಅಧ್ಯಕ್ಷರಾದ ಈರಣ್ಣ ದೇಯನ್ನವರ, ಶಂಕರ ಗುಡಸ, ನಗರ ಸೇವಕರುಗಳಾದ ರಾಜಶೇಖರ ಢೋಣಿ, ಪದಾಧಿಕಾರಿಗಳು ಉಪಸ್ಥಿತರಿದ್ದರು.

## ವಿಮಾನದ ಶೌಚಾಲಯದಲ್ಲಿ ಸಿಗರೇಟ್ ಸೇದಿದ ವ್ಯಕ್ತಿ ಅರೆಸ್ಟ್



ಬೆಂಗಳೂರು: ಇತ್ತೀಚಿನ ದಿನಗಳಲ್ಲಿ ವಿಮಾನಯಾನ ಸಂದರ್ಭದಲ್ಲಿ ಅಸಭ್ಯ ವರ್ತನೆ, ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸುತ್ತಿರುವ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿವೆ. ಸಹ ಪ್ರಯಾಣಿಕರ ಮೇಲೆ ಮೂತ್ರ ವಿಸರ್ಜನೆ, ತುರ್ತು ನಿರ್ಗಮನ ದ್ವಾರ ತೆರೆಯುವುದು, ವಿಮಾನ ಸಿಬ್ಬಂದಿ ಮೇಲೆ ಹಲ್ಲೆ ಹೀಗೆ ಅನೇಕ ಘಟನೆಗಳು ನಡೆದಿವೆ. ಅದಕ್ಕೆ ಪೂರಕವೆಂಬಂತೆ ಮತ್ತೊಂದು ಘಟನೆ ವರದಿಯಾಗಿದೆ.

ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪೊಲೀಸರಿಂದ ವಿಮಾನದ ಶೌಚಾಲಯದಲ್ಲಿ ಸಿಗರೇಟ್ ಸೇದಿದ ವ್ಯಕ್ತಿಯನ್ನು ಬಂಧಿಸಲಾಗಿದೆ. ಅಸ್ಸಾಂ ಮೂಲದ ಶೇಹರಿ ಚೌದರಿ ಎಂಬಾತ ಬಂಧಿತ ವ್ಯಕ್ತಿ.

ಇಂಡಿಗೊ ವಿಮಾನದಲ್ಲಿ ಅಸ್ಸಾಂನಿಂದ ಬೆಂಗಳೂರಿಗೆ ಬರುತ್ತಿದ್ದ. ಈ ವೇಳೆ ಶೌಚಾಲಯಕ್ಕೆ ಹೋಗುವ ನೆಪದಲ್ಲಿ ಹೋಗಿದ್ದಾನೆ. ಶೌಚಾಲಯದಲ್ಲಿ ಸಿಗರೇಟ್ ಸೇದುತ್ತಿರುವ ವಿಚಾರ ತಿಳಿದ ಸಿಬ್ಬಂದಿ, ಚೌದರಿಯನ್ನು ಹೊರಗೆ ಕರೆದು ಬುದ್ದಿ ಹೇಳಿದ್ದಾರೆ. ಇಷ್ಟಕ್ಕೆ ಸುಮ್ಮನಾಗದ ವಿಮಾನ ಕ್ಯಾಪ್ಟನ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪೊಲೀಸರಿಗೆ ದೂರು ನೀಡಿದ್ದ. ದೂರಿನ ಅಧಾರದ ಮೇಲೆ ಶೇಹರಿ ಚೌದರಿಯನ್ನು ಬಂಧಿಸಲಾಗಿದೆ.

# ನಿಪ್ಪಾಣಿ ಪೊಲೀಸರ ಕಾರ್ಯಾಚರಣೆ: ಇಬ್ಬರು ಕಳ್ಳರ ಬಂಧನ; 16.10 ಲಕ್ಷ ಮೌಲ್ಯದ 23 ದ್ವಿಚಕ್ರ ವಾಹನಗಳ ವಶ



ಬೆಳಗಾವಿ : ಇಬ್ಬರು ದ್ವಿಚಕ್ರ ವಾಹನ ಕಳ್ಳರನ್ನು ಬಂಧಿಸಿರುವ ಜಿಲ್ಲೆಯ ನಿಪ್ಪಾಣಿ ಶಹರ ಪೊಲೀಸ ಠಾಣೆಯ ಪೊಲೀಸರು ಬಂಧಿತ ಖದೀಮರಿಂದ ಸುಮಾರು 16.10 ಲಕ್ಷ ಮೌಲ್ಯದ 23 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸಂಜೀವ ಪಾಟೀಲ, ಹೆಚ್ಚುವರಿ ಎಸ್ ಪಿ ಎಮ್. ವೇಣುಗೋಪಾಲ, ಚಿಕ್ಕೋಡಿ ಡಿಎಸ್ ಪಿ ಬಸವರಾಜ ಯಲಗಾರ, ನಿಪ್ಪಾಣಿ ಸಿಪಿಐ ಎಸ್.ಸಿ.ಪಾಟೀಲ, ಇರುಗಳ ಮಾರ್ಗದರ್ಶನದಲ್ಲಿ ನಿಪ್ಪಾಣಿ ಶಹರ ಪಿಎಸ್ ಐ ವಿನೋದ ಪೂಜಾರಿ ಇವರ ನೇತೃತ್ವದಲ್ಲಿ ನಿಪ್ಪಾಣಿ ಶಹರ ಪೊಲೀಸ ಠಾಣೆಯ ಸಿಬ್ಬಂದಿಗಳಾದ ಎಎಸ್ ಐ ಎಮ್. ಜಿ. ಮುಜಾವರ, ಆರ್ಬಿ. ದಿವಟಿ, ಪಿ.ಎಮ್.ಗಸ್ತಿ, ಎಮ್.ಬಿ.ಕಲ್ಯಾಣಿ ಹಾಗೂ ಗಜಾನನ ಬೋವಿ, ಸಲೀಂ ಮುಲ್ಲಾ, ಎಸ್.ಎನ್. ಅಸ್ಕಿ, ಯಾಸೀನ ಮೌಲಾ ಕಳಾವಂತ, ಇವರೊಂದಿಗೆ ದಿ. 17 ರಂದು ನಿಲ್ದಾಣಿ ಶಹರ ಹದ್ದಿಯ ಶಿರಗುಪ್ಪಿ ರಸ್ತೆಯ ಕ್ರಾಸ್ ಹತ್ತಿರ ಇಬ್ಬರು ಆರೋಪಿತರನ್ನು ದಸ್ತಗಿರಿ ಮಾಡಲಾಯಿತು.

ಬಳಿಕ ಅವರ ಬಳಿ ಇದ್ದ ಒಂದು ಮೋಟಾರ ಸೈಕಲ್‌ನ್ನು ಜಪ್ತ ಮಾಡಿ, ಹೆಚ್ಚಿನ ತನಿಖೆ ನಡೆಸಲಾಗಿತ್ತು. ಈ ಆರೋಪಿತರು ಧಾರವಾಡ ಜಿಲ್ಲೆಯ ಧಾರವಾಡ ಉಪನಗರ ಠಾಣೆ-02, ಬೆಳಗಾವಿ ಶಹರ ವ್ಯಾಪ್ತಿಯ ಮಾರ್ಕೇಟ ಮೊಅಸ ಠಾಣೆ-01, ಎಪಿಎಮ್‌ಸಿ ಪೊಲೀಸ್ ಠಾಣೆ-01, ಮಾರಿಹಾಳ ಪೊಲೀಸ ಠಾಣೆ-04, ಬೆಳಗಾವಿ ಜಿಲ್ಲೆಯ ಸಂಕೇಶ್ವರ ಠಾಣೆ-01, ಬೈಲಹೊಂಗಲ-01, ನಿಪ್ಪಾಣಿ ಶಹರಪೊಲೀಸ್ ಠಾಣೆ-01 ಹಾಗೂ ಇನ್ನೂ 12 ಮೋಟಾರ ಸೈಕಲಗಳನ್ನು ಕಳವು ಮಾಡಿರುವದು ತನಿಖೆಯಲ್ಲಿ ತಿಳಿದು ಬಂದಿರುತ್ತದೆ.

ಸದರಿಯವರಿಂದ ನಿಪ್ಪಾಣಿ ಶಹರ ಪೊಲೀಸ್ ಠಾಣಾ ಗುನ್ನಾ ನಂ.29/2023 ಕಲಂ:379 ಐಪಿಸಿ ಪ್ರಕರಣದಲ್ಲಿ ಕಳುವಾದ ಒಂದು ಮೋಟರ ಸೈಕಲ ಹಾಗೂ ಈ ಮೇಲ್ಕಂಡಂತೆ ಇತರೇ ಕಡೆಗಳಲ್ಲಿ ಸದರಿ ಆರೋಪಿತರು ಕಳ್ಳತನಮಾಡಿರುವ ಇತರೇ 22 ಮೋಟರ ಸೈಕಲಗಳು ಹೀಗೆ ಒಟ್ಟು ರೂ. 16,10,000/-ಕಿಮ್ಮತ್ತಿನ 23 ಮೋಟರ ಸೈಕಲಗಳನ್ನು ವಶಪಡಿಸಿಕೊಳ್ಳಲಾಗಿದೆ.

ಈ ಯಶಸ್ವಿ ಕಾರ್ಯಾಚರಣೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸಂಜೀವ ಪಾಟೀಲ ಅವರು ಪ್ರಶಂಶೆ ವ್ಯಕ್ತಪಡಿಸಿ ಬಹುಮಾನವನ್ನು ಘೋಷಿಸಿರುತ್ತಾರೆ.

# ರಾಹುಲ್ ಗಾಂಧಿ ಸ್ವಾಗತಕ್ಕೆ ಕುಂದಾನಗರಿ ಸಜ್ಜು

## ಇಂದು ಕೈ ಕಾರ್ಯಕರ್ತರಿಗೆ ಶಕ್ತಿ ತುಂಬಲಿದ್ದಾರೆ ಕಾಂಗ್ರೆಸ್ ನಾಯಕ

ಬೆಳಗಾವಿ: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಭಾರತ್ ಜೋಡೋ ಕಾರ್ಯಕ್ರಮ ಪಾದಯಾತ್ರೆ ಬಳಿಕ ಮೊದಲ ಬಾರಿಗೆ ಬೆಳಗಾವಿಗೆ ಆಗಮಿಸುತ್ತಿದ್ದು, ರಾಹುಲ್ ಸ್ವಾಗತಕ್ಕೆ ಕೈ ಪಕ್ಷ ಸಕಲ ಸಿದ್ಧತೆ ಮಾಡಿಕೊಂಡಿದೆ.

ಹೌದು... ಮಾ.20ರಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಿಂದ ನಗರಕ್ಕೆ ಆಗಮಿಸಲಿದ್ದು, ಅಂದು ಬೆಳಗ್ಗೆ 11 ಗಂಟೆಗೆ ಸಿಪಿಎಡ್ ಮೈದಾನದಲ್ಲಿ ನಡೆಯುವ ಯುವಕ್ರಾಂತಿ ಹೆಸರಿನ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಪಾದಯಾತ್ರೆಯ ಉದ್ದೇಶ, ಅವರ ಅನುಭವ, ವಿಚಾರಧಾರೆಗಳನ್ನು ಜನರ ಜತೆ ಹಂಚಿಕೊಳ್ಳಲಿದ್ದಾರೆ. ಮುಖ್ಯವಾಗಿ ಕಾಂಗ್ರೆಸ್ ಕಾರ್ಯಕರ್ತರಿಗೆ ಶಕ್ತಿ ನೀಡಲೆಂದು ಕಾಂಗ್ರೆಸ್ ನಾಯಕ ಕುಂದಾನಗರಿಗೆ ಆಗಮಿಸಲಿದ್ದಾರೆ.

ರಾಹುಲ್ ಆಗಮನಕ್ಕೆ ಭರ್ಜರಿ ಸಿದ್ಧತೆ: ಬೆಳಗಾವಿಯಲ್ಲಿ ಕಾಂಗ್ರೆಸ್ ನಾಯಕನ ಆಗಮನ ಹಿನ್ನೆಲೆಯಲ್ಲಿ ಕೈ ನಾಯಕರು ಭರ್ಜರಿ ಸಿದ್ಧತೆ ನಡೆಸಿದ್ದಾರೆ. ಅಲ್ಲದೇ ಸಾಂಬ್ರಾ ಮಾರ್ಗದಿಂದ ಸಿಪಿಎಡ್ ಮೈದಾನದವರೆಗೆ ರಸ್ತೆಯ ಎರಡು ಬದಿಗಳಲ್ಲಿ ಕಾಂಗ್ರೆಸ್ ಪಕ್ಷದ ಧ್ವಜವನ್ನು ಕಾರ್ಯಕರ್ತರು ಕಟ್ಟುತ್ತಿದ್ದಾರೆ. ನಗರದ ಸಿಪಿಎಡ್ ಮೈದಾನದಲ್ಲಿ ಯುವಕ್ರಾಂತಿ ಹೆಸರಿನ ಸಮಾವೇಶ ನಡೆಸಲು ದೊಡ್ಡ ಪ್ರಮಾಣದಲ್ಲಿ ವೇದಿಕೆ ನಿರ್ಮಾಣ ಮಾಡಲಾಗುತ್ತಿದೆ. ಮಹಾತ್ಮಾ ಗಾಂಧೀಜಿಯವರು ಕಾಂಗ್ರೆಸ್ ನಾಯಕತ್ವವನ್ನು ವಹಿಸಿಕೊಂಡ ಜಾಗದಿಂದಲೇ ನನ್ನ ಪಾದಯಾತ್ರೆಯ ಪ್ರಥಮ ಸಭೆ ನಡೆಸಬೇಕು ಎಂಬ ಕಾರಣಕ್ಕೆ ರಾಹುಲ್ ಗಾಂಧಿಯವರು ಬೆಳಗಾವಿಯನ್ನು ಆಯ್ಕೆ ಮಾಡಿಕೊಂಡಿಕೊಂಡು ಕುಂದಾನಗರಿಗೆ ಆಗಮಿಸುತ್ತಿದ್ದಾರೆ.

ಏಳು ಜಿಲ್ಲೆಯ ಕೈ ನಾಯಕರು ಭಾಗಿ: ಕಾಂಗ್ರೆಸ್ ಹಮ್ಮಿಕೊಂಡ ಯುವಕ್ರಾಂತಿ ಹೆಸರಿನ ಸಮಾವೇಶದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನಾಳೆ ನಗರಕ್ಕೆ ಆಗಮಿಸಲಿದ್ದು, ಸಾರ್ವಜನಿಕ ಸಭೆಯಲ್ಲಿ ಭಾಗವಹಿಸಲಿದ್ದಾರೆ. 'ಬೆಳಗಾವಿ, ಚಿಕ್ಕೋಡಿ, ಧಾರವಾಡ, ಬಾಗಲಕೋಟೆ, ವಿಜಯಪುರ, ಗದಗ, ಹಾವೇರಿ ಜಿಲ್ಲೆಗಳ ಶಾಸಕರು, ಮಾಜಿ ಶಾಸಕರು, ಮಾಜಿ ಸಂಸದರು, ಮುಖಂಡರು, 2018ರ ವಿಧಾನಸಭೆ ಚುನಾವಣೆ ಹಾಗೂ 2019ರ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿದ







ಅಭ್ಯರ್ಥಿಗಳು ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ. ರಾಜ್ಯದ ದೊಡ್ಡ ಜಿಲ್ಲೆ ಎನ್ನಲಾಗುವ ಬೆಳಗಾವಿ ವ್ಯಾಪ್ತಿಯೊಂದರಲ್ಲೇ 18 ವಿಧಾನಸಭಾ ಕ್ಷೇತ್ರಗಳಿವೆ. ಹೀಗಾಗಿ ಕಾರ್ಯಕ್ರಮಕ್ಕೆ ಐದು ಲಕ್ಷ ಹೆಚ್ಚು ಜನ ಸೇರುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಇದು ಚುನಾವಣೆ ಸಂಬಂಧ ಕೈ ಪಕ್ಷ ಮಾಡುತ್ತಿರುವ ಪೂರ್ವ ಸಿದ್ಧತೆ ಅಂತಲೂ ವಿಶ್ಲೇಷಿಸಲಾಗುತ್ತಿದೆ.

ಬೆಳಗಾವಿಯಿಂದಲೇ ಚುನಾವಣೆಗೆ ರಣ ಕಹಳೆ: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭಾರತ್ ಜೋಡೋ ಬಳಿಕ ಮೊದಲ ಬಾರಿಗೆ ಕರ್ನಾಟಕಕ್ಕೆ ಆಗಮಿಸುತ್ತಿದ್ದು, ಅವರು ಬೆಳಗಾವಿಯಿಂದಲೇ ಚುನಾವಣೆಗೆ ರಣ ಕಹಳೆ ಊದಲಿದ್ದಾರೆ. ಸದ್ಯ ರಾಜ್ಯದಲ್ಲಿ ವಿಧಾನಸಭೆ ಚುನಾವಣಾ ಕಣ ರಂಗೇರುತ್ತಿದ್ದು, ಕಾಂಗ್ರೆಸ್ ಪಕ್ಷದ ಪರಮೋಚ್ಚ ನಾಯಕ ರಾಹುಲ್ ಗಾಂಧಿ ಅವರು ಬೆಳಗಾವಿಗೆ ಭೇಟಿ ನೀಡುತ್ತಿರುವುದು ಕಾಂಗ್ರೆಸ್ ಪಕ್ಷದಲ್ಲಿ ಭಾರೀ ಸಂಚಲನಕ್ಕೆ ಕಾರಣವಾಗಿದೆ. ಕಾಂಗ್ರೆಸ್ ಪಕ್ಷದ ಪಾಲಿಗೆ ಕರ್ನಾಟಕ ಮೊದಲಿನಿಂದಲೂ ಬಹುದೊಡ್ಡ ಆಶಾಕಿರಣ. ಹೀಗಾಗಿ ಗತವೈಭವ ಮತ್ತೆ ಸಾಬೀತುಪಡಿಸುವ ನಿಟ್ಟಿನಲ್ಲಿ ಇದೀಗ ರಾಹುಲ್ ಗಾಂಧಿ ಬೆಳಗಾವಿಗೆ ಆಗಮಿಸುತ್ತಿದ್ದಾರೆ. ಅವರ ಭೇಟಿಯಿಂದ ಕರ್ನಾಟಕದ ಪಾರಂಪರಿಕ ಮತಗಳು ಗಣನೀಯವಾಗಿ ಕಾಂಗ್ರೆಸ್ ಪಕ್ಷದ ಬುಟ್ಟಿಗೆ ಸೇರಲಿವೆ. ಅದರಲ್ಲೂ ಮೊದಲಿನಿಂದಲೂ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಾ ಬಂದಿರುವ ಮತದಾರರು ಮತ್ತೆ ತಮ್ಮ ನಿಷ್ಠೆಯನ್ನು ಕಾಂಗ್ರೆಸ್ ಪರ ನಿರೂಪಿಸುವ ಸಾಧ್ಯತೆ ಇದೆ. ಹೀಗಾಗಿ ರಾಹುಲ್ ಗಾಂಧಿ ಬೆಳಗಾವಿ ಗಡಿ ಜಿಲ್ಲೆಯಲ್ಲಿ ಮತದಾರರ ಪಾಲಿಗೆ ಭಾರಿ ಸಂಚಲನವನ್ನೇ ಸೃಷ್ಟಿಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

ಈ ಯುವಕ್ರಾಂತಿ ಸಮಾವೇಶದಲ್ಲಿಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪಸಿಂಗ್ ಸುರ್ಜೆವಾಲಾ, ಮಾಜಿ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಸತೀಶ್ ಜಾರಕಿಹೊಳಿ, ಸಲೀಂ ಅಹ್ಮದ್ ಖಾನ್, ಪ್ರಚಾರ ಸಮಿತಿ ಅಧ್ಯಕ್ಷ ಎಂ.ಬಿ. ಪಾಟೀಲ, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಬಿ.ಕೆ. ಹರಿಪ್ರಸಾದ, ಕಾಂಗ್ರೆಸ್ ನಾಯಕ ಕೆ.ಎಚ್. ಮುನಿಯಪ್ಪ, ರಾಷ್ಟ್ರೀಯ ಯುತ್ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್, ರಾಜ್ಯ ಯುತ್ ಕಾಂಗ್ರೆಸ್ ಅಧ್ಯಕ್ಷ ಮಹಮದ್ ನಲಪಾಡ್, ವಿಧಾನ ಪರಿಷತ್ ಸದಸ್ಯರಾದ ನಾರಾಯಣ ಸ್ವಾಮಿ, ಮಾಜಿ ಸಚಿವ ವಿನಯ ಕುಲಕರ್ಣಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ, ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪಾ ಅಮರನಾಥ ಸೇರಿದಂತೆ ಆರು ಜಿಲ್ಲೆಯ ಕೈ ನಾಯಕರು ಹಾಗೂ ಲಕ್ಷಾಂತರ ಕೈ ಕಾರ್ಯಕರ್ತರು ಭಾಗಿಯಾಗಲಿದ್ದಾರೆ.

## ಬಿಜೆಪಿ ಅಂದರೆ ಭ್ರಷ್ಟ ಜನತಾ ಪಾರ್ಟಿ: ರಾಶಿಂಗೆ



ಹುಕ್ಕೇರಿ : ಭಾರತೀಯ ಜನತಾ ಪಾರ್ಟಿ(ಬಿಜೆಪಿ) ಇಲ್ಲಿಯವರೆಗೂ ಬ್ಯುಸಿನೆಸ್ (ವ್ಯವಹಾರ) ಜನತಾ ಪಕ್ಷವಾಗಿತ್ತು. ಈಗ ಭ್ರಷ್ಟ ಜನತಾ ಪಕ್ಷ ಎಂಬುದೂ ಸಾಬೀತಾಗಿದೆ ಎಂದು ಕಾಂಗ್ರೆಸ್ ಪ್ರಚಾರ ಸಮಿತಿ ಚಿಕ್ಕೋಡಿ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ ವಾಗ್ದಾಳಿ ನಡೆಸಿದರು.

ತಾಲೂಕಿನ ಅವರಗೋಳ, ಶಿರಗಾಂವ, ಸುಲ್ತಾನಪುರ, ಹಂಜ್ಯಾನಟ್ಟಿ, ಅಮ್ಮಣಗಿ ಗ್ರಾಮಗಳಲ್ಲಿ ರವಿವಾರ ಮನೆ ಮನೆಗೆ ತೆರಳಿ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ ವಿತರಿಸಿ ಮಾತನಾಡಿದ ಅವರು, ಚುನಾವಣೆಗೆ ಖರ್ಚು ಮಾಡಲು ಬಿಜೆಪಿ ಜನರ ಹಣ ಲೂಟಿ ಮಾಡುತ್ತಿದೆ. ಬಿಜೆಪಿ ಶಾಸಕರು ಮತ್ತು ಮುಖಂಡರು ಶೇ.40 ರಷ್ಟು ಕಮಿಷನ್ ದಂಧೆಯಲ್ಲಿ ತೊಡಗಿದ್ದಾರೆ ಎಂದು ಆರೋಪಿಸಿದರು.

ಬಿಜೆಪಿಯವರಿಗೆ ನೈತಿಕತೆ ಇದ್ದರೆ ಲಂಚ ಪಡೆದು ಸಿಕ್ಕಿಬಿದ್ದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ನಾ ಖಾವುಂಗ, ಖಾನೇದೂಂಗ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳುತ್ತಾರೆ. ಚನ್ನಗಿರಿ ಶಾಸಕ ಮಾಡಾಳ್ ವೀರುಪಾಕ್ಷಪ್ಪ ಪುತ್ರ ಕಂತೆ ಕಂತೆ ಲಂಚದ ಹಣದೊಂದಿಗೆ ಸಿಕ್ಕಿ ಬೀಳುತ್ತಾರೆ. ಇದು ಬಿಜೆಪಿಯ ಮಾತಿಗೂ ಕೃತಿಗೂ ಸಂಬಂಧವಿಲ್ಲ ಎಂಬುದನ್ನು ಎತ್ತಿ ತೋರುತ್ತದೆ ಎಂದು ಅವರು ಹರಿಹಾಯ್ದರು.

ವಿಶೇಷವಾಗಿ ಕಾಂಗ್ರೆಸ್ ಘೋಷಣೆಗಳಾದ ಗೃಹ ಲಕ್ಷ್ಮೀ, 200 ಯುನಿಟ್ ವಿದ್ಯುತ್ ಉಚಿತ ಹಾಗೂ 10 ಕೆಜಿ ಪಡಿತರ ಅಕ್ಕಿ ಉಚಿತ ನೀಡುವ ಭರವಸೆಯಿಂದ ರಾಜ್ಯದಲ್ಲಿ ಕಾಂಗ್ರೆಸ್ ಪರ ಗಾಳಿ ಬೀಸುತ್ತಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬರಲಿದ್ದು ಅನೇಕ ಜನಪರ ಯೋಜನೆಗಳು ಜಾರಿಯಾಗಲಿವೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜನವಿರೋಧಿ ನೀತಿ ಅನುಸರಿಸುತ್ತಿದ್ದು ಎಲ್ಲ ರಂಗದಲ್ಲೂ ವಿಫಲವಾಗಿವೆ. ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ. ಸಾಮಾನ್ಯ ಜನರ ಜೀವನ ಕಷ್ಟಕರವಾಗಿದೆ. ಬಿಜೆಪಿ ಚುನಾವಣೆಯಲ್ಲಿ ಆಡಳಿತ ಯಂತ್ರವನ್ನು ದುರುಪಯೋಗಪಡಿಸಿಕೊಂಡು, ಹಣ, ಹೆಂಡ ಮತ್ತು ಉಡುಗೊರೆಯಂತ ವಸ್ತುಗಳನ್ನು ಹಂಚಿ ಮತ್ತೇ ಅಧಿಕಾರಕ್ಕೆ ಬರುವ ಹಗಲುಗನಸು ಕಾಣುತ್ತಿದೆ ಎಂದು ಅವರು ದೂರಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿಜಯ ರವದಿ, ಮುಖಂಡರಾದ ವಿನಯ ಪಾಟೀಲ, ಬಸವರಾಜ ಪಾಟೀಲ, ರೇಖಾ ಚಿಕ್ಕೋಡಿ, ಬಸವರಾಜ ದೇವುಗೋಳ, ಆನಂದ ಖಾತೇದಾರ ಮತ್ತಿತರರು ಉಪಸ್ಥಿತರಿದ್ದರು.

## ವಿಜೃಂಭಣೆಯಿಂದ ವಿಠ್ಠಲ್ ರುಕ್ಮಾಯಿ ಪರ್ಯಾನ ಧಮಣೆ




ಬೆಳಗಾವಿ ಧಾಮಣೆ: ಅದ್ದೂರಿಯಾಗಿ ಕುಂಭ ಮೇಳದೊಂದಿಗೆ ವಿಠ್ಠಲ ರುಕ್ಮಿಣಿ ಪಾರಾಯಣ ಬೆಳಗಾವಿ ಸಮೀಪದ ಧಾಮಣೆ ಎಸ್ ಬೈಲೂರ ಗ್ರಾಮದಲ್ಲಿ ಪಂಡರಪೂರ ವಿಠ್ಠಲ ರುಕ್ಮಿಣಿ ಭಕ್ತಾದಿಗಳ ಸೇವೆ ಅಪಾರವಾಗಿ ಕಂಡು ಬಂತು.ಜಗತ್ತಿನ ಏಕೈಕ ದೇವರೆಂದರೆ ಪಂಡರಪೂರ ವಿಠ್ಠಲ ಈ ಸಂದರ್ಬದಲ್ಲಿ ಭಕ್ತಾಧಿಗಳು ಕುಂಬ ಕೊಡ ವೀಣೆ ಜೊತೆಗೆ ವಾದ್ಯಮೇಳದೊಂದಿಗೆ ಗ್ರಾಮದಲ್ಲಿ ವಿಠ್ಠಲ ನ ಹರಿನಾಮ ಮಾಡುತ್ತ ಆದ್ಯಾತ್ಮಿಕವಾದ ತಾಣ ವಿಠ್ಠಲ ನಿಗೆ ಎಷ್ಟು ನಾಮಸ್ಮರಣೆ ಮಾಡಿದರೂ ಕಡಿಮೆ.ಯುವಕರು ಮಹಿಳೆಯರು ನಾಗರಿಕರು ಭಕ್ತಾಧಿಗಳು ಅಧಿಕ ಸಂಖ್ಯೆಯಲ್ಲಿ ಭಾಗವಹಿಸಿ ವಿಠ್ಠಲನ ನಾಮಸ್ಮರಣೆ ಮಾಡುತ್ತಾ ಪುನೀತರಾದರು.ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು ಮುಖಂಡರು ಭಾಗವಹಿಸಿದ್ದರು.ದಕ್ಷಿಣ ಭಾರತದ ಸುಪ್ರಸಿದ್ದ ತೀರ್ಥಕ್ಷೇತ್ರಗಳಲ್ಲಿ ಪಂಢರಾಪುರವು ಒಂದು. ಈ ದೇವಾಲಯವು ಮಹರಾಷ್ಟ್ರದ ಪಂಢಾರಪುರದಲ್ಲಿ ಇದ್ದು, ಅತಿ ಹೆಚ್ಚು ಭಕ್ತಾದಿಗಳು ಭೇಟಿ ನೀಡುವ ಸುಪ್ರಸಿದ್ದ ದೇವಾಲಯವಾಗಿದೆ. ಈ ಪುಣ್ಯ ಕ್ಷೇತ್ರದಲ್ಲಿ ವಿಷ್ಣು ಸ್ವರೂಪಿಯಾದ ಪಾಂಡುರಂಗ ಸ್ವಾಮಿಯು ತನ್ನ ಪತ್ನಿ ರುಕ್ಮಿಣಿಯೊಂದಿಗೆ ನೆಲೆಸಿದ್ದಾನೆ. ಈ ದೇವಾಲಯದ ಸಮೀಪದಲ್ಲಿ ಚಂದ್ರಭಾಗನದಿ ಇದೆ. ಈ ಪಾವನ ನದಿಯಲ್ಲಿ ಸ್ನಾನ ಮಾಡಿದವರಿಗೆ ಸಕಲ ಪಾಪ ಕರ್ಮಗಳು ಪರಿಹಾರವಾಗುತ್ತದೆ ಎಂಬ ಪ್ರತೀತಿ ಇದೆ. ವಿಶೇಷವೇನೆಂದರೆ ಸಕ್ಷಾತ್ ಭಗವಂತ ಪುಂಡಲೀಕನ ಕಮಲದಂತಹ ಪಾದ ಚರಣವನ್ನು ಮುಟ್ಟಿ ಭಕ್ತಿಯಿಂದ ನಮಸ್ಕರಿಸಬಹುದು. ಈ ದೇವಾಲಯವನ್ನು 12ನೇ ಶತಮಾನದ ಮುಂಚೆ ಹೊಯ್ಸಳದ ರಾಜ ವಿಷ್ಣುವರ್ಧನ ಹೆಮದ್ಬನ್ತಿ ವಾಸ್ತು ಶಿಲ್ಪದಲ್ಲಿ ಸ್ಥಾಪಿಸಿದನು. ಭವ್ಯವಾದ ಗೋಪುರ, ಮನೋಹರ ವಿನ್ಯಾಸ, ದೇವಾಲಯದ ಒಳಗೆ ಹಲವು ದೇವತಾ ಮೂರ್ತಿಗಳನ್ನು ಇಲ್ಲಿ ಕಾಣಬಹುದು.

ಇದೇ ತರಹ ಸಾಕ್ಷಾತ ವಿಠ್ಠಲನೆ ವಿಠಲ್ ರಾಖ್ಮಾಯಿ ಪಾರಾಯನ ಪ್ರತಿ ವರ್ಷದಂತೆ ಈ ವರ್ಷ ಕುಡಾ ದಾಮಣೆ (ಎಸ್ ) ಬೈಲೂರ್ ಗ್ರಾಮದಲ್ಲಿ ಅದ್ದೂರಿಯಾಗಿ ನಡೆಯಿತು.

ಗ್ರಾಮದಲ್ಲಿ ಮಹಿಳೆಯರು ವಿಠಲ್ ರುಕ್ಮಾಯಿ ಜಾತ್ರೆಯ ನಿಮಿತ್ಯವಾಗಿ ಗ್ರಾಮದಲ್ಲಿ ವಿಠಲ್ ಕೈಯಲ್ಲಿರುವ ವಿನೆಯನ್ನು ಗ್ರಾಮದಲ್ಲಿ ಮೆರವನಿಗೆ ಅತಿ ವಿಜ್ರಂಬನೆಯಿಂದಾ ನಡೆಯಿತು ಈ ಕಾರ್ಯಕ್ರಮಕ್ಕೆ ಗ್ರಾಮದ ಮಹಿಳೆಯರು ಗ್ರಾಮದ ತುಂಬ ರಂಗು ರಂಗಿನ ರಂಗೊಲಿ ಬೀಡಿಸಿ ನಂತರ ಕುಂಭು ಕೊಡಗನ್ನು ಹೊತ್ತು ಮಹಿಳೆಯರು ಭಾಗವಹಿಸಿದರು ಈ ಗ್ರಾಮಕ್ಕೆ ಭೆಟಿ ಕೊಡುವ ಹಾಗೇ ಭಕ್ತಾಧಿಗಳು ಸೇವೆಯಲ್ಲಿ ಭಾಗವಹಿಸಿದ್ದರು. ವಿಣಾ ಪೂಜೆ ಮಾಳಕರಿಗಳ ನಾಮಸ್ಮರಣೆ ಕುಣಿತ ಹೀಗೆ ಹಲವಾರು ಭಕ್ತಾಧಿಗಳು ತಮ್ಮ ತಮ್ಮ ಭಕ್ತಯನ್ನು ವಿಠ್ಠಲನಿಗೆ ಅರ್ಪಿಸಿದರು. ವಿಟ್ಟಲ್ ಪಾಂಡುರಂಗ ಕಮಿಟಿಯ ಪರಶುರಾಮ್ ಕಾಂಬಳೆ ಅಪ್ಪಾಜಿ ಪಾಟೀಲ್ ದಾಖಲು ವಾಡೆಕರ್ ಬಾಬಿ ಹಜಗೋಳಿಕರ್ ಲಕ್ಷ್ಮಣ ಬುಕ್ಯಾಳಕರ್ ಪ್ರಭಾಕರ್ ಪಾಟೀಲ್ ದಾಖಲು ಪಾಟೀಲ್ ಆನಂದ ವಾಡೇಕರ್ ಶಟ್ಟು ಬಾಬು ಪಾಟೀಲ್ ಬಾಳು ಚೌಕುಲ್ಕಾರ್, ಗ್ರಾಮದ ಗ್ರಾಮಸ್ಥರು ಭಾಗವಹಿಸಿದ್ದರು.

## ಕೃಷಿ ಹೊಂಡದಲ್ಲಿ ಮುಳಗಿ ಇಬ್ಬರು ಮಕ್ಕಳ ಸಾವು



ಹುಕ್ಕೇರಿ: ಕೃಷಿ ಹೊಂಡದಲ್ಲಿ ಬಿದ್ದ ಚಂಡ (ಬಾಲ) ತೆಗೆಯಲು ಹೋಗಿ ಬಾಲಕರಿಬ್ಬರು ಮುಳಗಿ ಮೃತ ಪಟ್ಟ ಹೃದಯ ವಿದ್ರಾವಕ ಘಟನೆ ತಾಲೂಕಿನ ಯಾದಗೂಡ ಗ್ರಾಮದಲ್ಲಿ ರವಿವಾರ ಸಂಜೆ ನಡೆದಿದೆ.

ಹುಕ್ಕೇರಿ ತಾಲೂಕಿನ ಯಾದಗೂಡ ಗ್ರಾಮದ ಬಾಲಕರಾದ ಯಮನಪ್ಪ ಪ್ರಕಾಶ ರಡ್ಡೆರಟ್ಟಿ(10). ನಾಲ್ಕನೇ ತರಗತಿಯಲ್ಲಿ ಹಾಗೂ ಯೇಸು ಬಸಪ್ಪ ವಗ್ಗರ (14) ಎಂಟನೇ ತರಗತಿಯಲ್ಲಿ ಓದುತ್ತಿರುವ ಮೃತ ಬಾಲಕರು.

ಗ್ರಾಮದ ಲಕ್ಷ್ಮೀ ಗುಡಿ ಹತ್ತಿರ ರವಿವಾರ ಬಾಲಕರು ಕ್ರಿಕೆಟ್ ಆಟ ಆಡಲು ಹೋಗಿ ಸಮೀಪದ ಹೊಂಡದಲ್ಲಿ ಚಂಡು ನೀರಿನಲ್ಲಿ ಬಿದ್ದಿದರಿಂದ ತರಲು ಹೋಗಿ ಒರ್ವ ಬಾಲಕ ಮುಳಗಿದ್ದು ಆತನ ರಕ್ಷಣೆ ಧಾವಿಸಿದ ಮತ್ತೋಬ ಬಾಲಕ ನೀರಿನಲ್ಲಿ ಮುಳಗಿ ಮೃತ ಪಟ್ಟಿದ್ದಾರೆ. ಬಾಲಕರಿಬ್ಬರ ಶವಗಳನ್ನು ಹೊರತೆಗೆದು ಹುಕ್ಕೇರಿ ಸರಕಾರಿ ಆಸ್ಪತ್ರೆಯಲ್ಲಿ ಶವಪರೀಕ್ಷೆ ನಡೆಸಲಾಗಿದೆ.

## ಮಾಜಿ ಸಿಎಂ ಸಿದ್ದರಾಮಯ್ಯ ಪರ ಬ್ಯಾಟ್ ಬೀಸಿದ ಬಿಜೆಪಿ ಶಾಸಕ ರಾಜುಗೌಡ



ಯಾದಗಿರಿ: ಸಿದ್ದರಾಮಯ್ಯಗೆ ಕೋಲಾರದಲ್ಲಿ ಸ್ಪರ್ಧಿಸುವುದು ಬೇಡ ಎಂದು ರಾಹುಲ್ ಗಾಂಧಿ ಹೇಳುವುದು ತಪ್ಪು ಎನ್ನುವ ಮೂಲಕ ಮಾಜಿ ಸಿಎಂ ಸಿದ್ದರಾಮಯ್ಯ ಪರ ಬಿಜೆಪಿ ಶಾಸಕ ರಾಜುಗೌಡ ಬ್ಯಾಟ್ ಬೀಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಕಾಂಗ್ರೆಸ್ ಪಕ್ಷದ ಪ್ರಮುಖ ನಾಯಕರು. ಸಿದ್ದರಾಮಯ್ಯ ಅವರನ್ನು ಸೋಲಿಸಲು ಕಾಂಗ್ರೆಸ್‌ನವರೇ ಹುನ್ನಾರ ನಡೆಸಿದ್ದಾರೆ. ಸಿದ್ದರಾಮಯ್ಯ ಅವರು ಎಲ್ಲಾ ರೀತಿಯ ಪ್ಲ್ಯಾನ್ ಮಾಡಿಯೇ ಕೋಲಾರಕ್ಕೆ ಹೋಗಿದ್ದರು. ಕೋಲಾರದಲ್ಲಿ ನಿಲ್ಲುವ ಬಗ್ಗೆ ಘೋಷಣೆ ಮಾಡಿ, ಹಲವು ಸಭೆಗಳನ್ನು ಮಾಡಿದ್ದಾರೆ. ಘೋಷಣೆಗೂ ಮುನ್ನ ಬೇಡ ಎಂದರೆ ಸರಿಯಿತ್ತು. ಆದರೆ ಈಗ ರಾಹುಲ್ ಗಾಂಧಿ ಅವರು ಸಿದ್ದರಾಮಯ್ಯಗೆ ಕೋಲಾರದಲ್ಲಿ ಸ್ಪರ್ಧಿಸುವುದು ಬೇಡ ಎನ್ನುವುದು ತಪ್ಪು ಎಂದು ಹೇಳಿದರು.

ರಾಜಕೀಯವಾಗಿ ಎತ್ತರಕ್ಕೆ ಬೆಳೆದಾಗ ಸ್ವಪಕ್ಷದಲ್ಲಿ ವಿರೋಧಿಗಳು ಹುಟ್ಟಿಕೊಳ್ಳುತ್ತಾರೆ. ಅವರ ಪಕ್ಷದವರೇ ಸೋಲಿಸಲು ಪ್ಲ್ಯಾನ್ ಮಾಡುತ್ತಿರಬಹುದು. ಇದು ರಾಹುಲ್ ಗಾಂಧಿಗೆ ಮೆಸೇಜ್ ತಲುಪಿ ಈ ರೀತಿ ಹೇಳಿರಬಹುದು. ಆದರೆ ಕೋಲಾರದಲ್ಲಿ ಸ್ಪರ್ಧೆ ಬೇಡ ಅನ್ನೋದು ತಪ್ಪು, ಅವರೊಬ್ಬ ದೊಡ್ಡ ನಾಯಕರು. ದೇವೆಗೌಡರು, ಯಡಿಯೂರಪ್ಪ, ಸಿದ್ದರಾಮಯ್ಯ ಇಂತವರಿಗೆ ಕ್ಷೇತ್ರದ ಬಗ್ಗೆ ಬೇಡ ಎನ್ನುವುದು ತಪ್ಪು ಎಂದರು.

## ನ್ಯಾಯಾಲಯ ಪ್ರಾರಂಭಕ್ಕೆ ಜಿಲ್ಲಾ ನ್ಯಾಧೀಶರಿಂದ ಸ್ಥಳ ಪರಿಶೀಲನೆ




ತಾಳಿಕೋಟೆ: ತಾಳಿಕೋಟೆ ಪಟ್ಟಣವು ತಾಲೂಕಾ ಕೇಂದ್ರವಾಗಿರುವದರಿಂದ ಹಾಗೂ ಇಲ್ಲಿಯ ಜನರ ನ್ಯಾಯಗಳನ್ನು ತ್ವರೀತಗತಿಯಲ್ಲಿ ಇಡೇರಿಸುವ ದೃಷ್ಠಿಯಿಂದ ಪಟ್ಟಣದಲ್ಲಿ ನ್ಯಾಯಾಲಯ ಪ್ರಾರಂಬಿಸುವದಕ್ಕಾಗಿ ರವಿವಾರರಂದು ಜಿಲ್ಲಾ ಸತ್ರ ಹಾಗೂ ಮುಖ್ಯ ನ್ಯಾಯಾಧೀಶರಾದ ಶಿವಾಜಿ ನಲವಡೆ ಅವರು ಬೆಟ್ಟಿ ನೀಡಿ ಸ್ಥಳವನ್ನು ಪರೀಶಿಲನೆ ನಡೆಸಿದರು.

ಪಟ್ಟಣದ ಪುರಸಭೆಯ ಜಾಗೆಯಲ್ಲಿ ನ್ಯಾಯಾಲಯ ನಡೆಸುವದಕ್ಕೆ ಮತ್ತು ಕಛೇರಿ ಕಡತಗಳನ್ನು ಹಾಗೂ ನ್ಯಾಯವಾದಿಗಳಿಗಾಗಿ ಬಾರ್ ಅಸೋಶೇಷ ಪ್ರಾರಂಬಿಸುವದಕ್ಕೆ ಸ್ಥಳವನ್ನು ಪರಿಶೀಲಿಸಿದರಲ್ಲದೇ ಬರಲಿರುವ ರವಿವಾರರಂದು ಬೆಂಗಳೂರ ಉಚ್ಚನ್ಯಾಯಾಲಯದ ನ್ಯಾಯಾಧೀಶರು ಆಗಮಿಸುತ್ತಿದ್ದ ಅಷ್ಟರೋಳಗೆ ಎಲ್ಲ ಸಿದ್ದತೆ ಮಾಡಿಕೊಳ್ಳಲು ಪುರಸಭೆ ಮುಖ್ಯಾಧಿಕಾರಿಗಳಿಗೆ ಸೂಚಿಸಿದರು.

ಇದೇ ಸಮಯದಲ್ಲಿ ಮಾತನಾಡಿದ ಪುರಸಭೆ ಸದಸ್ಯ ವಾಸುದೇವ ಹೆಬಸೂರ ಅವರು ಪಟ್ಟಣದಲ್ಲಿ ನ್ಯಾಯಾಲಯ ಪ್ರಾರಂಭಿಸುತ್ತಿರುವದು ಸಂತಸವಾಗಿದೆ. ಇದರಿಂದ ಈ ಭಾಗದ ಜನರಿಗೆ ಬಹಳೇ ಅನುಕೂಲವಾಗಲಿದೆ ನ್ಯಾಯಾಲಯ ಪ್ರಾರಂಭಕ್ಕೆ ಸಂಬಂದಿಸಿದಂತೆ ಪುರಸಭೆ ವತಿಯಿಂದಾಗಲಿ ಅಥವಾ ಪಟ್ಟಣದ ನಾಗರಿಕರ ವತಿಯಿಂದಾಗಲಿ ಎಲ್ಲ ರೀತಿಯ ಸಹಕಾರವನ್ನು ನೀಡುತ್ತೇವೆ ನ್ಯಾಯಾಲಯಕ್ಕೆ ಬೇಕಿರುವ ಎಲ್ಲ ಸಿದ್ದತೆಗಳನ್ನು ಬರಲಿರುವ ರವಿವಾರದೊಳಗೆ ಮಾಡಿಕೊಡುತ್ತೇವೆಂದರು.

## ಉಚಗಾಂವ ಕೇಸರಿ ಕುಸ್ತಿ ಪಂದ್ಯಾವಳಿಗೆ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಚಾಲನೆ



ಬೆಳಗಾವಿ: ಉಚಗಾಂವ ಗ್ರಾಮದ ಶ್ರೀ ಹನುಮಾನ ಕುಸ್ತಿ ಸಂಘದ ವತಿಯಿಂದ ಆಯೋಜಿಸಿದ್ದ ಉಚಗಾಂವ ಕೇಸರಿ ಕುಸ್ತಿ ಪಂದ್ಯಾವಳಿಗೆ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಭಾನುವಾರ ಸಂಜೆ ಚಾಲನೆಯನ್ನು ನೀಡಿದರು.

ಬೆಳಗಾವಿ ಗ್ರಾಮೀಣ ಕ್ಷೇತ್ರ ವೈವಿದ್ಯತೆಗೆ ಹೆಸರಾಗಿದ್ದು, ಕ್ರೀಡೆ ಸೇರಿದಂತೆ ಕ್ಷೇತ್ರದ ವೈಶಿಷ್ಟ್ಯಗಳಿಗೆ ಸರ್ವ ರೀತಿಯ ಪ್ರೋತ್ಸಾಹ ನೀಡಲಾಗುತ್ತಿದೆ. ಅವುಗಳಿಗೆ ಇನ್ನಷ್ಟು ಸಹಕಾರ ನೀಡಲು ಮುಂದಿನ ದಿನಗಳಲ್ಲಿ ವಿಶೇಷ ಯೋಜನೆ ರೂಪಿಸಲಾಗುವುದು ಎಂದು ಲಕ್ಷ್ಮೀ ಹೆಬ್ಬಾಳಕರ್ ಈ ಸಂದರ್ಭದಲ್ಲಿ ಭರವಸೆ ನೀಡಿದರು.

ಈ ಭಾಗದ ಯುವಕರು ಅತ್ಯಂತ ಕ್ರಿಯಾಶೀಲರಾಗಿದ್ದು, ಅಗಾಧ ಜ್ಞಾನವನ್ನು ಹೊಂದಿದ್ದಾರೆ. ಅದಕ್ಕೆ ತಕ್ಕ ಪ್ರೋತ್ಸಾಹ, ಸಹಕಾರ ಅವರಿಗೆ ಈ ಹಿಂದೆ ಸಿಗಲಿಲ್ಲ. ಇದಕ್ಕಾಗಿ ಹಲವು ಯೋಜನೆಗಳನ್ನು ಹಾಕಿಕೊಳ್ಳಲಾಗಿದ್ದು, ಸಧ್ಯವೇ ಆಡಳಿತಕ್ಕೆ ಬರಲಿರುವ ಕಾಂಗ್ರೆಸ್ ಸರಕಾರದಿಂದ ಅವುಗಳನ್ನು ಜಾರಿಗೊಳಿಸಲಾಗುವುದು ಎಂದು ಹೆಬ್ಬಾಳಕರ್ ತಿಳಿಸಿದರು. ಈ ಸಮಯದಲ್ಲಿ ಗ್ರಾಮದ ಹಿರಿಯರು, ಯುವರಾಜ ಕದಂ, ಜಾವೇದ ಜಮಾದಾರ, ಬಸು ತೆರಸೆ ಪದ್ಮರಾಜ ಪಾಟೀಲ, ಸೋಮನಾಥ ಪಾಟೀಲ, ರಘು ಖಂಡೇಕರ್ ನಾಣು ಕೊರಡೆ ಅಪ್ಪಾಜಿ ಜಾದವ ಎಲ್ ಡಿ ಚೌಗಲೆ ಸುನಿಲ ದೇಸಾಯಿ ಹಾಗೂ ಮುಂತಾದವರು ಉಪಸ್ಥಿತರಿದ್ದರು.

## ಸುಬ್ರಹ್ಮಣ್ಯ ನಗರ: ನೂತನ ಸರಕಾರಿ ಶಾಲೆ ಉದ್ಘಾಟನೆ

## ಇದು ದೇವರ ಕೆಲಸ ಎಂದು ಬಣ್ಣಿಸಿದ ನಟ ರಿಷಭ್ ಶೆಟ್ಟಿ

ಬೆಂಗಳೂರು: ಮಲ್ಲೇಶ್ವರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಸುಬ್ರಹ್ಮಣ್ಯ ನಗರದಲ್ಲಿ ನಿರ್ಮಿಸಿರುವ ನೂತನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಭಾನುವಾರ ಉದ್ಘಾಟಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ 'ಕಾಂತಾರ' ಖ್ಯಾತಿಯ ನಟ ಮತ್ತು ನಿರ್ದೇಶಕ ರಿಷಭ್ ಶೆಟ್ಟಿ, "ಅಶ್ವತ್ಥನಾರಾಯಣ ಅವರು ತಮ್ಮ ಕ್ಷೇತ್ರದಲ್ಲಿ ಅತ್ಯುತ್ತಮ ಸರಕಾರಿ ಶಾಲೆಗಳು ಇರುವಂತೆ ನೋಡಿಕೊಂಡಿದ್ದಾರೆ. ಇದು ನಿಜಕ್ಕೂ ದೇವರ ಕೆಲಸವಾಗಿದೆ. ಇಲ್ಲಿರುವ ಮೂಲಸೌಕರ್ಯಗಳನ್ನು ನೋಡಿ ನಾನು ಚಕಿತನಾಗಿದ್ದೇನೆ" ಎಂದರು.

"ಸರಕಾರಿ ಶಾಲೆಗಳ ಬಗ್ಗೆ ಪೋಷಕರಲ್ಲಿ ತಾತ್ಸಾರವಿದೆ. ಆದರೆ ಸರಕಾರಿ ಶಾಲೆಗಳಲ್ಲಿ ಓದಿದ ಮಕ್ಕಳೇ ಹೆಚ್ಚು ಪ್ರತಿಭಾವಂತರು ಎನ್ನುವುದು ಎಲ್ಲ ಸಮೀಕ್ಷೆಗಳಲ್ಲೂ ಸಾಬೀತಾಗಿದೆ. ಆದ್ದರಿಂದ ಸರಕಾರಿ ಶಾಲೆಗಳನ್ನು ಬಲಪಡಿಸಬೇಕು" ಎಂದು ಅವರು ಅಭಿಪ್ರಾಯ ಪಟ್ಟರು.

"ಕೇವಲ ಸಿನಿಮಾ ಮಾಡುವುದರಿಂದ ಸರಕಾರಿ ಶಾಲೆಗಳ ಕಡೆಗಿನ ನನ್ನ ಜವಾಬ್ದಾರಿ



ಮುಗಿದಿಲ್ಲ. ಇಂತಹ ಉಪಕ್ರಮಗಳಲ್ಲಿ ನಮ್ಮನ್ನೂ ಅಶ್ವತ್ಥ ನಾರಾಯಣ ಅವರು ತೊಡಗಿಸಿ ಕೊಳ್ಳಬೇಕು. ಏಕೆಂದರೆ, ನಾನು ಕೂಡ ಸರಕಾರಿ ಶಾಲೆಯಲ್ಲೇ ಓದಿದವನು" ಎಂದು ಅವರು ಹೇಳಿದರು.

ಶ್ರೀ ಯದುಗಿರಿ ಯತಿರಾಜ ನಾರಾಯಣ ರಾಮಾನುಜ ಜೀಯರ್ ಮಾತನಾಡಿ, "ಮಲ್ಲೇಶ್ವರ ಕ್ಷೇತ್ರದಲ್ಲಿ ಅಶ್ವತ್ಥನಾರಾಯಣ ಅವರು ಶಿಕ್ಷಣ ಕ್ಷೇತ್ರವನ್ನು ಆಮೂಲಾಗ್ರವಾಗಿ ಬದಲಿಸಿದ್ದಾರೆ. ಜತೆಗೆ ಆರೋಗ್ಯ ಕ್ಷೇತ್ರದ ಚಿತ್ರಣ ಕೂಡ ಸಮಗ್ರವಾಗಿ ಸುಧಾರಿಸಿದೆ. ಇವು ನಿಜವಾದ ಜನಪರ ಕೆಲಸಗಳಾಗಿವೆ" ಎಂದು ಶ್ಲಾಘಿಸಿದರು.

"ಧರ್ಮವು ಉಳಿದರೆ ಮಾತ್ರ ರಾಷ್ಟ್ರವು ಉಳಿಯುತ್ತದೆ. ಕಳೆದ ಎಂಟು ವರ್ಷಗಳಲ್ಲಿ ಭಾರತದ ಶಕ್ತಿ ಏನೆಂಬುದು ಜಗತ್ತಿಗೆ ಗೊತ್ತಾಗಿದೆ. ನಮ್ಮ ಮಲ್ಲೇಶ್ವರ ಮಾದರಿಯಲ್ಲಿ ನಮ್ಮ ಸುಬ್ರಹ್ಮಣ್ಯ ನಗರ ಕೂಡ ಸೇರಿ-ಕೊಂಡಿದೆ ಎಂದು ಅವರು ನುಡಿದರು.

ಸದ್ಯದಲ್ಲೇ ಸರಕಾರಿ ಪ್ರೌಢಶಾಲೆ ಆರಂಭ: ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, "ಮಲ್ಲೇಶ್ವರ ಕ್ಷೇತ್ರದ ವ್ಯಾಪ್ತಿಯಲ್ಲಿ ಇದು 24ನೇ ಸರಕಾರಿ ಶಾಲೆಯಾಗಿದೆ. ಸದ್ಯದಲ್ಲೇ ಇಲ್ಲಿಂದ ಕೂಗಳತೆ ದೂರದಲ್ಲಿ ಸರಕಾರಿ ಪ್ರೌಢಶಾಲೆ ಆರಂಭಿಸಲಾಗುವುದು" ಎಂದರು.

"ನಾನು ಕೂಡ ಓರ್ವ ಶಿಕ್ಷಕರ ಮಗ. ನನಗೆ ಶಿಕ್ಷಣದ ಶಕ್ತಿ ಏನೆಂದು ಗೊತ್ತಿದೆ. 15 ವರ್ಷಗಳ ಹಿಂದೆ ಶಾಸಕನಾಗಿ ಆಯ್ಕೆಯಾದಾಗ ನಾನು ಕೆಲಸ ಮಾಡಲು ತೊಡಗಿದ್ದೇ ಶಾಲೆಗಳ ಮೂಲಕ. ಇಂದು ಇದರಲ್ಲಿ ಮಲ್ಲೇಶ್ವರ ಮಾದರಿ ರಾಷ್ಟ್ರ ಮಟ್ಟದಲ್ಲಿ ಗಮನ ಸೆಳೆದಿದೆ" ಎಂದು ಅವರು ತಿಳಿಸಿದರು.

ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಬೋಧನೆ ಮತ್ತು ಕಲಿಕೆಗೆ ಒತ್ತು ಕೊಡಲಾಗಿದೆ. ಡಿಜಿಟಲೀಕರಣಕ್ಕೆ ಆದ್ಯತೆ ಇದ್ದು, ಇಲ್ಲಿನ ಕಲಿಕೆಯು ಯಾವ ಖಾಸಗಿ ಶಾಲೆಗೂ ಕಡಿಮೆ ಇಲ್ಲ" ಎಂದು ಅವರು ಪ್ರತಿಪಾದಿಸಿದರು.

ಕಾರ್ಯಕ್ರಮದಲ್ಲಿ ಮಲ್ಲೇಶ್ವರ ಬಿಜೆಪಿ ಮಂಡಲ ಅಧ್ಯಕ್ಷೆ ಕಾವೇರಿ ಕೇದಾರನಾಥ್, ಶಿಕ್ಷಣ ಫೌಂಡೇಶನ್ ಸಂಸ್ಥಾಪಕ ಪ್ರಸನ್ನ ಮುಂತಾದವರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089